# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ –02 ಸಂಚಿಕೆ –262 | ಆರ್‌ಎನ್‌ಐ ನಂ: ಕೆಎಆರ್‌ಕೆಎನ್/2023/88462 | ಕೆಎ/ಎಸ್‌ಕೆ/ಸಿಟಿಎ–874/2024–2026 | ಚಿತ್ರದುರ್ಗ | ದಿನಾಂಕ:12–05–2025 ಸೋಮವಾರ | ಪುಟ: 4 | ಬೆಲೆ : ರೂ.2–00
Volume - 02 Issue - 262 | RNI No: KARKAN/2023/88462 | KA/SK/CTA-874/2024-2026 | Chitradurga | Date: 12-05-2025 Monday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಕೇಂದ್ರ ಹಾಗೂ ರಾಜ್ಯ ಸರ್ಕಾರ ಜನ ವಿರೋಧಿ ನೀತಿ ಖಂಡಿಸಿ ಹೋರಾಟ 2

ದೇವರ ಮೇಲೆ ಇರುವ ಅಪಾರವಾದ ಭಕ್ತಿ, ನಮ್ಮೆಲ್ಲರ ಬದುಕನ್ನು ಪಾವನಗೊಳಿಸಿದೆ 3

ಪರಿಸರ ಸಂರಕ್ಷಣೆ ರಕ್ಷಣೆ ನಮ್ಮೆಲ್ಲರ ಹೊಣೆ 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ಆಸ್ತಿ ತೆರಿಗೆ ಶೇ.5ರ ರಿಯಾಯಿತಿ: ಜೂನ್ 30 ರವರೆಗೆ ಅವಧಿ ವಿಸ್ತರಣೆ

» **ಚಿತ್ರದುರ್ಗ**

2025–26ನೇ ಸಾಲಿನ ಆರ್ಥಿಕ ವರ್ಷದಲ್ಲಿ ಆಸ್ತಿ ತೆರಿಗೆಯ ಶೇಕಡ 5ರ ರಿಯಾಯಿತಿ ಅವಧಿಯನ್ನು 2025ರ ಜೂನ್ 30 ರವರೆಗೆ ವಿಸ್ತರಿಸಿ ಸರ್ಕಾರ ಆದೇಶ ಹೊರಡಿಸಿದೆ. ಚಿತ್ರದುರ್ಗ ನಗರದ ಆಸ್ತಿ ಮಾಲೀಕರು ತಮ್ಮ ಮನೆ, ನಿವೇಶನಗಳಿಗೆ ಸಕಾಲದಲ್ಲಿ ತೆರಿಗೆಯನ್ನು ಪಾವತಿಸಿ, ಶೇಕಡ 5ರ ರಿಯಾಯಿತಿಯ ಸದುಪಯೋಗ ಪಡೆದುಕೊಳ್ಳಬೇಕು ಎಂದು ಚಿತ್ರದುರ್ಗ ನಗರಸಭೆ ಪೌರಾಯುಕ್ತೆ ಎಂ.ರೇಣುಕಾ ಕೋರಿದ್ದಾರೆ.

### ಸರ್ಕಾರಿ ನೌಕರರ ಮಕ್ಕಳ ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ

» **ಚಿತ್ರದುರ್ಗ**


ರಾಜ್ಯ ಸರ್ಕಾರಿ ಅಧಿಕಾರಿಗಳು ಮತ್ತು ನೌಕರರ ಮಕ್ಕಳ ಪ್ರತಿಭಾ ಪುರಸ್ಕಾರಕ್ಕೆ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ ವತಿಯಿಂದ ಅರ್ಜಿಯನ್ನು ಆಹ್ವಾನಿಸಿದ್ದು, ಅದಕ್ಕಾಗಿ ರಾಜ್ಯ ಸರ್ಕಾರಿ ಅಧಿಕಾರಿಗಳು ಮತ್ತು ನೌಕರರು ತಮ್ಮ ಮಕ್ಕಳು ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿಯಲ್ಲಿ ಶೇ.90 ಕ್ಕಿಂತ ಹೆಚ್ಚು ಅಂಕ ಪಡೆದವರು ಮೇ–31ರ ಒಳಗಾಗಿ ಆನ್‌ಲೈನ್ ಮೂಲಕ https://ksgeanews.blogspot.com ಅರ್ಜಿ ನೋಂದಾಯಿಸಬೇಕೆಂದು ರಾಜ್ಯ ಸರ್ಕಾರಿ ನೌಕರರ ಸಂಘ ಚಿತ್ರದುರ್ಗ ಜಿಲ್ಲಾ ಶಾಖೆ ಜಿಲ್ಲಾಧ್ಯಕ್ಷರಾದ ಮಾಲತೇಶ್ ಮುದ್ದಜ್ಜಿ ತಿಳಿಸಿದ್ದಾರೆ.

ಅರ್ಜಿ ಸಲ್ಲಿಸುವ ವಿದ್ಯಾರ್ಥಿಯ ತಂದೆ–ತಾಯಿ ಕರ್ನಾಟಕ ರಾಜ್ಯ ಸರ್ಕಾರದ ಖಾಯಂ ನೌಕರರಾಗಿರಬೇಕು. ಸಂಘವು ನಿಗದಿಪಡಿಸಿರುವ ನಮೂನೆಯಲ್ಲಿ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಸಂಬಂಧಿಸಿದ ಜಿಲ್ಲಾ/ತಾಲ್ಲೂಕು ಶಾಖೆಯ ಅಧ್ಯಕ್ಷರ ರುಜು ಮೊಹರಿನೊಂದಿಗೆ ದೃಢೀಕರಿಸಿ ಆನ್‌ಲೈನ್‌ನಲ್ಲಿ ಅಪ್‌ಲೋಡ್ ಮಾಡಬೇಕು ಎಂದು ಮನವಿ ಮಾಡಿದ್ದಾರೆ.

### ಬುರುಜನರೊಪ್ಪ ಗ್ರಾಮ ಪಂಚಾಯಿತಿ ಅಧ್ಯಕ್ಷೆ ವಿರುದ್ಧ ಅವಿಶ್ವಾಸ ನಿರ್ಣಯ

» **ಚಿತ್ರದುರ್ಗ**

ಹಿರಿಯೂರು ತಾಲ್ಲೂಕು ಬುರುಜನರೊಪ್ಪ ಗ್ರಾಮ ಪಂಚಾಯಿತಿ ಅಧ್ಯಕ್ಷೆ ರಾಧಮ್ಮ ಜಿ.



ಉಪಾಧ್ಯಕ್ಷೆ ಹೆಚ್.ಜ್ಯೋತಿ ಇವರುಗಳ ವಿರುದ್ಧ ಅವಿಶ್ವಾಸ ನಿರ್ಣಯ ಮಂಡಿಸಲಾಯಿತು. ಬುರುಜನರೊಪ್ಪ ಗ್ರಾಮ ಪಂಚಾಯಿತಿ ಅಧ್ಯಕ್ಷೆ–ಉಪಾಧ್ಯಕ್ಷೆ ವಿರುದ್ಧ ಅವಿಶ್ವಾಸ ನಿರ್ಣಯಕ್ಕಾಗಿ ನಿಗಧಿತನಮೂನೆ–1ರಲ್ಲಿಉಪವಿಭಾಗಾಧಿಕಾರಿಗಳಿಗೆ ಮನವಿ ಸಲ್ಲಿಸಿದ ಕಾರಣ ಇತ್ತೀಚೆಗೆ ಕರೆಯಲಾಗಿದ್ದ ಸಭೆಯಲ್ಲಿ ಒಟ್ಟು 19 ಸದಸ್ಯರ ಪೈಕಿ ಹದಿಮೂರು ಸದಸ್ಯರುಗಳು ಕೈ ಎತ್ತುವ ಮೂಲಕ ರಾಧಮ್ಮ ಹಾಗೂ ಹೆಚ್.ಜ್ಯೋತಿ ಇವರುಗಳ ವಿರುದ್ಧ ಮತ ಚಲಾಯಿಸಿದ್ದರಿಂದ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್‌ರಾಜ್ ನಿಯಮಗಳು 1994 ರ 3(9) ರನ್ವಯ ಬರುಜನರೊಪ್ಪ ಗ್ರಾ ಪಂ ಅಧ್ಯಕ್ಷೆ, ಉಪಾಧ್ಯಕ್ಷ ಅಧಿಕಾರದಿಂದ ಕೆಳಗಿಳಿಸಲಾಗಿದೆ.

### ಚಿತ್ರದುರ್ಗ ನಗರಸಭೆ: ಬಿ ಖಾತಾ ಅಭಿಯಾನ

» **ಚಿತ್ರದುರ್ಗ**

ಚಿತ್ರದುರ್ಗ ನಗರಸಭೆ ವತಿಯಿಂದ ಇದೇ 12 ರವರೆಗೆ ನಗರದ ಚೋಳಗುಡ್ಡ ಹಾಗೂ ಮಹೇಶ್ವರಿ ಲೇಔಟ್‌ನಲ್ಲಿ ಬಿ ಖಾತಾ ಅಭಿಯಾನ ನಡೆಯಲಿದೆ. ನಗರದ ಅಗಸನಕಲ್ಲು, ಚೋಳಗುಡ್ಡ ಜನರಿಗೆ ಅನುಕೂಲವಾಗಲು ಅಗಸನಕಲ್ಲು ಅಂಜುಮಾನ್ ಬಳಿ ಹಾಗೂ ಮಹೇಶ್ವರಿ ಲೇಔಟ್‌ನ ಶನಿಮಹಾತ್ಮ ದೇವಸ್ಥಾನದ ಬಳಿ 12 ರವರೆಗೆ ಅಂದೋಲನ ಮಾಡುತ್ತಿದ್ದು, ಸಾರ್ವಜನಿಕರು ಅಲ್ಲೇ ಬಂದು ಅರ್ಜಿಗಳನ್ನು ನೀಡಿ, ಬಿ ಖಾತಾವನ್ನು ಪಡೆಯಬಹುದಾಗಿದೆ. ಸಾರ್ವಜನಿಕರು ಈ ಅವಕಾಶವನ್ನು ಸದುಪಯೋಗಪಡಿಸಿಕೊಳ್ಳುವಂತೆ ನಗರಸಭೆ ಪೌರಾಯುಕ್ತೆ ಎಂ.ರೇಣುಕಾ ತಿಳಿಸಿದ್ದಾರೆ.

**ಶಿವಶರಣೆ ಮಹಾಸಾಧ್ವಿ ಹೇಮರೆಡ್ಡಿ ಮಲ್ಲಮ್ಮ ಜಯಂತಿಯಲ್ಲಿ ಸಹಾಯಕ ಪ್ರಾಧ್ಯಾಪಕ ಡಾ.ಜಿ.ವಿ.ರಾಜಣ್ಣ**

# ಸ್ತ್ರೀ ಸಮಾಜಕ್ಕೆ ಆದರ್ಶ ಹೇಮರೆಡ್ಡಿ ಮಲ್ಲಮ್ಮ

» **ಚಿತ್ರದುರ್ಗ**

ಸಂಸಾರದಲ್ಲಿಯೇ ಇದ್ದು ಸಾಧಕಿಯಾಗಿ, ಸ್ತ್ರೀ ಸಮಾಜಕ್ಕೆ ಆದರ್ಶ ಸ್ತ್ರೀ ಶಿವಶರಣೆ ಮಹಾಸಾಧ್ವಿ ಹೇಮರೆಡ್ಡಿ ಮಲ್ಲಮ್ಮ ಎಂದು ಚಳ್ಳಕೆರೆ ಬಾಪೂಜಿ ಪ್ರಥಮ ದರ್ಜೆ ಕಾಲೇಜು ಕನ್ನಡ ವಿಭಾಗ ಸಹಾಯಕ ಪ್ರಾಧ್ಯಾಪಕ ಡಾ.ಜಿ.ವಿ.ರಾಜಣ್ಣ ಹೇಳಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶನಿವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ನಗರಸಭೆ ಇವರ ಸಂಯುಕ್ತಾಶ್ರಯದಲ್ಲಿ ಶಿವಶರಣೆ ಮಹಾಸಾಧ್ವಿ ಹೇಮರೆಡ್ಡಿ ಮಲ್ಲಮ್ಮ ಜಯಂತಿ ಆಚರಣೆ ಸಮಾರಂಭದಲ್ಲಿ ಉಪನ್ಯಾಸ ನೀಡಿದರು.

ಕಾಯಕದ ಮೂಲಕ, ಸಂಸಾರದ ನೊಗಕ್ಕೆ ಹೆಗಲು ಕೊಡುವ ಮೂಲಕ ಭಕ್ತಿಯ ಸಾಧನೆ ಮಾಡಿ, ಭಕ್ತಿ ಮಾರ್ಗದ ಮೂಲಕ ಅನುಭಾವಿಯಾದವಳು ಮಲ್ಲಮ್ಮ. ತಾನು ಬದುಕಿನಲ್ಲಿ ಕಂಡುಂಡ ಅನುಭವಗಳನ್ನು ಇತರರಿಗೆ ಹಂಚುವ ದಾರಿ ತೋರುವ ಅನುಭಾವಿ ಮಲ್ಲಮ್ಮ. ಗೃಹಧರ್ಮ ಪಾಲಿಸುತ್ತಾ ನೋವುಂಡ ಸ್ಥಳದಲ್ಲೇ ನೋವಿಗೆ ಮದ್ದು ಮಾಡುತ್ತಾ ತನ್ನವರನ್ನು ಅವರ ಅಜ್ಞಾನದಿಂದ ಅರಿವಿನ ಕಡೆಗೆ ಕರೆತಂದು ಕಾಯಕದ ಮೂಲಕವೇ ಮಲ್ಲಿಕಾರ್ಜುನನ್ನು ಕಾಣಲು ಸಾಧ್ಯವಾಗಿಸಿದವಳು ಮಲ್ಲಮ್ಮ.



ಮನೆಗೆದ್ದು–ಜಗಗೆಲ್ಲು ಎನ್ನುವ ತತ್ವ ಅವಳದ್ದು ಎಂದು ಹೇಳಿದರು.

ನಾಡಿನ ಚರಿತ್ರೆಯೊಳಗೆ ನೂರಾರು ರಾಣಿ–ಮಹಾರಾಣಿಯರು ಸಿಗಬಹುದು. ಹಾಗೆಯೇ ಸಾಂಸ್ಕೃತಿಕ–ಆಧ್ಯಾತ್ಮಿಕ ಸಾಧನೆಯ ಉತ್ತುಂಗಕ್ಕೇರಿದ ಅನುಭಾವಿ ಮಹಿಳೆಯರು ದೊರಕಬಹುದು ಆದರೆ ಇವರೆಲ್ಲರಿಗಿಂತ ಭಿನ್ನವಾಗಿ ಕುಟುಂಬದ ಗೃಹಿಣಿಯಾಗಿ ತನ್ನ ಮನೆಯೊಳಗೆ ನೂರಾರು ಕಷ್ಟ–ನೋವುಗಳ ನಡುವೇ ಬದುಕಿ ಅದನ್ನೇ ಸಾಧನೆಯ ಹಾದಿಯಾಗಿಸಿಕೊಂಡು ಬದುಕಿ ತೋರಿಸಿಕೊಟ್ಟ ಮಹಾಶರಣೆ ಹೇಮರೆಡ್ಡಿ ಮಲ್ಲಮ್ಮ ಎಂದು ತಿಳಿಸಿದ ಅವರು, ಮಹಿಳೆಯನ್ನು ಗುರುವಾಗಿಸಿಕೊಂಡ ಆ ಹೆಸರಿನ ಮೂಲಕ ಗುರುತಿಸುವ ಏಕೈಕ ಸಮುದಾಯ ಹೇಮರೆಡ್ಡಿ ಮಲ್ಲಮ್ಮ ಸಮುದಾಯ ಎಂದು ಹೇಳಿದರು.

ಉಪವಿಭಾಗಾಧಿಕಾರಿ ಮೆಹಬೂಬ್ ಜಿಲಾನಿ ಖುರೇಷಿ ಮಾತನಾಡಿ, ಹೇಮರೆಡ್ಡಿ ಇಡೀ ಸ್ತ್ರೀ ಕುಲಕ್ಕೆ ಮಾದರಿಯಾಗಿರುವಂತೆ ವ್ಯಕ್ತಿತ್ವ ರೂಪಿಸಿಕೊಂಡು,

ಕೌಟುಂಬಿಕ ಸಂಕಷ್ಟಗಳನ್ನು ಮೆಟ್ಟಿನಿಂತು, ಸಾಮಾಜಿಕ ಚಿಂತನೆಯಲ್ಲಿ ಬದುಕಿನ ಆದರ್ಶ ಮೌಲ್ಯ ರೂಢಿಸಿಕೊಂಡು ಧಾರ್ಮಿಕ ಸಾಧನೆಗೈದ ಮಹಾಶಿವ ಶರಣೆ ಹೇಮರೆಡ್ಡಿ ಮಲ್ಲಮ್ಮ ಎಂದು ಹೇಳಿದರು.

ರಡ್ಡಿ ಸಮಾಜಕ್ಕೆ ಬಡತನ ಬರದಂತೆ ಶ್ರೀ ಶೈಲ ಮಲ್ಲಿಕಾರ್ಜುಸ್ವಾಮಿಯಲ್ಲಿ ಬೇಡಿಕೊಂಡು ಸಮಾಜದ ಏಳಿಗೆಗಾಗಿ ಹೇಮರೆಡ್ಡಿ ಮಲ್ಲಮ್ಮ ಶ್ರಮಿಸಿದ್ದಾರೆ ಎಂದರು. ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಎಂ.ಕೆ. ತಾಜ್‌ಪೀರ್ ಮಾತನಾಡಿ, ಮಹಾಸಾಧ್ವಿ ಹೇಮರೆಡ್ಡಿ ಮಲ್ಲಮ್ಮ ಸ್ತ್ರೀ ಕುಲಕ್ಕೆ ಮಾದರಿ. ಅವರ ತತ್ವಾದರ್ಶಗಳು ಸರ್ವಕಾಲಿಕ ಶ್ರೇಷ್ಠ. ಎಷ್ಟೇ ಕಷ್ಟ ತೊಂದರೆಗಳು ಬಂದರೂ ಕೂಡ ಅದನ್ನು ಎದುರಿಸಿದ ದಿಟ್ಟ ಮಹಿಳೆ. ಇವರ ಆದರ್ಶ ಜೀವನ ಎಲ್ಲರಿಗೂ ಮಾದರಿಯಾಗಿದ್ದು, ಅವರು ಹಾಕಿಕೊಟ್ಟ ಮಾರ್ಗದಲ್ಲಿ ಪ್ರತಿಯೊಬ್ಬ ಮಹಿಳೆ ನಡೆಯುವುದು ಅವಶ್ಯವಿದೆ ಎಂದು ಹೇಳಿದರು.

ಜಿಲ್ಲಾ ವೀರಶೈವ–ಲಿಂಗಾಯತ ಹೇಮರೆಡ್ಡಿ ಮಲ್ಲಮ್ಮ ಸಮಾಜ ಅಧ್ಯಕ್ಷ ಜಿ.ಚಿದಾನಂದಪ್ಪ ಮಾತನಾಡಿ, ಹೇಮರೆಡ್ಡಿ ಮಲ್ಲಮ್ಮ ಕಷ್ಟ–ಕಾರ್ಪಣ್ಯಗಳ ನಡುವೆಯೂ ಆದರ್ಶ ಬದುಕು ಸಾಗಿಸಿ ಸಮಾಜಕ್ಕೆ ದಾರಿ ದೀಪವಾದವರು. ರಡ್ಡಿ ಸಮುದಾಯದ ಬದುಕು ಸದಾ ಬಂಗಾರವಾಗಲಿ ಎಂದು ಪ್ರಾರ್ಥಿಸಿದ ಆ ಮಹಾ ತಾಯಿ ಸಮಾಜಕ್ಕೆ ಮಾದರಿ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಆಹಾರ ಇಲಾಖೆ ಸಹಾಯಕ ನಿರ್ದೇಶಕ ಎಸ್.ಕೆ.ಮಲ್ಲಿಕಾರ್ಜುನ್, ಜಿಲ್ಲಾ ವೀರಶೈವ–ಲಿಂಗಾಯತ ಹೇಮರೆಡ್ಡಿ ಮಲ್ಲಮ್ಮ ಸಮಾಜ ಪ್ರಧಾನಕಾರ್ಯದರ್ಶಿ ಡಿ.ಟಿ.ಶಿವಾನಂದಪ್ಪ, ಮುಖಂಡರಾದ ನಾಗರಾಜ್ ಸಂಗಂ, ಡಾ.ಫಾಲಾಕ್ಷಪ್ಪ, ಡಾ.ಮಹಂತೇಶ್, ಬಸವರಾಜ್ ಮೇಟಿಕುರ್ಕಿ, ವೀರಭದ್ರಪ್ಪ, ಡಾ.ರಮೇಶ್, ಜಿ.ನಾಗಭೂಷಣ್, ಸುಜಾತಾ ಶಿವಾನಂದಪ್ಪ, ಸುನೀತಾ ಮಲ್ಲಿಕಾರ್ಜುನ್, ಅಲ್ಲಾಡಿ ವಿಜಯ್ ಕುಮಾರ್, ಮನೋಹರ್, ತಿಪ್ಪೇಸ್ವಾಮಿ, ಮಲ್ಲಿಕಾರ್ಜುನಪ್ಪ, ಮಹಂತೇಶ್, ಚಂದ್ರಶೇಖರ್, ಪ್ರತಿಭಾ ಅರುಣ್, ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ಪಾಪಯ್ಯ, ಡಿ.ಆರ್.ಲೋಕೇಶ್ವರಪ್ಪ ಸೇರಿದಂತೆ ಮತ್ತಿತರರು ಇದ್ದರು. ಚಿತ್ರದುರ್ಗದ ಕೆಪಿಎಂ ಗಣೇಶಯ್ಯ ಮತ್ತು ತಂಡದವರು ಗೀತಗಾಯನ ನಡೆಸಿಕೊಟ್ಟರು.

# ತುರುವನೂರಿನ ಶ್ರೀಆಂಜನೇಯಸ್ವಾಮಿ ರೇಖಾ ಚಿತ್ರ ಗ್ಲೋಬಲ್ ವರ್ಲ್ಡ್ ರೆಕಾರ್ಡ್ ದಾಖಲೆ

## ಸಾಧನೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸೇರಿದಂತೆ ಗಣ್ಯರ ಅಭಿನಂದನೆ

» **ಚಳ್ಳಕೆರೆ**

ಚಳ್ಳಕೆರೆ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ತುರುವನೂರು ಗ್ರಾಮದ ಪೊಲೀಸ್ ಠಾಣೆಯ ಪಕ್ಕದ ಸುಮಾರು 5 ಎಕರೆ ಜಮೀನಿನಲ್ಲಿ ಬೆಂಗಳೂರಿನ ಶ್ರೀಸಾಯಿಕ್ಯಾಡ್‌ಸಂಸ್ಥೆಶ್ರೀಆಂಜನೇಯಸ್ವಾಮಿಯರೇಖಾಚಿತ್ರವನ್ನುರಚಿಸಿದ್ದು ಸದರಿ ರೇಖಾಚಿತ್ರ ಗ್ಲೋಬಲ್ ವರ್ಲ್ಡ್ ರೆಕಾರ್ಡ್ ಗೆ ಸೇರ್ಪಡೆಯಾಗಿದ್ದು ಸಾಯಿ ಕ್ಯಾಡ್ ಸಂಸ್ಥೆಯ ಅಧ್ಯಕ್ಷರು ಹಾಗೂ ಪದಾಧಿಕಾರಿಗಳು ರಾಜ್ಯಮುಖ್ಯಮಂತ್ರಿ ಎಸ್.ಸಿದ್ದರಾಮಯ್ಯ, ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ ಶಾಸಕ ಟಿ.ರಘುಮೂರ್ತಿಯವರನ್ನು ಮುಖ್ಯಮಂತ್ರಿಗಳ ನಿವಾಸದಲ್ಲಿ ಅಭಿನಂದಿಸಿದರು. ಅಭಿನಂದನೆಯನ್ನು ಸ್ವೀಕರಿಸಿ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ಶ್ರೀಸಾಯಿಕ್ಯಾಡ್ ಸಂಸ್ಥೆ ತುರುವನೂರಿನ ಐದು ಎಕರೆ ಪ್ರದೇಶದಲ್ಲಿ ಆಂಜನೇಯಸ್ವಾಮಿಯ ರೇಖಾಚಿತ್ರವನ್ನುಬಿಡಿಸಿ ಗ್ಲೋಬಲ್ ವರ್ಲ್ಡ್ ರೆಕಾರ್ಡ್ ಗೆ ಸೇರ್ಪಡೆಯಾಗಿದ್ದೀರಿ, ಗ್ರಾಮೀಣ ಭಾಗದಲ್ಲಿ ಇಂತಹ ಸಾಧನೆಗಳನ್ನು ಗುರುತಿಸುವುದು ಅಪರೂಪವಾದ ಕಾಲದಲ್ಲಿ ಸಂಸ್ಥೆ ಮಾಡಿರುವ ಕಾರ್ಯ ಶ್ಲಾಘನೀಯವೆಂದರು. ಅಭಿನಂದನ ಸಮಾರಂಭದಲ್ಲಿ ಪಾಲ್ಗೊಂಡಿದ್ದ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ, ನಮ್ಮ ಜಿಲ್ಲೆಯಲ್ಲಿ ಶಾಸಕ ರಘುಮೂರ್ತಿ ಕ್ಷೇತ್ರದಲ್ಲಿ ಇಂತಹ ಮಹಾನ್ ಸಾಧನೆ ಮಾಡಿದ ಸಾಯಿಕ್ಯಾಡ್ ಸಂಸ್ಥೆ ಕಾರ್ಯದಿಂದ ರಾಜ್ಯಕ್ಕೂ ಜಿಲ್ಲೆಗೂ ಕೀರ್ತಿ ತಂದಿದ್ದೀರಿರೆಂದು ಅಭಿನಂದಿಸಿದರು. ಕ್ಷೇತ್ರದ ಶಾಸಕ, ಸಣ್ಣಕೈಗಾರಿಕೆ ಅಭಿವೃದ್ಧಿಮಂಡಳಿ ಅಧ್ಯಕ್ಷ ಟಿ.ರಘುಮೂರ್ತಿ ಮಾತನಾಡಿ, ತುರುವನೂರಿನ ರೇಖಾ ಚಿತ್ರ ಸಾಯಿಕ್ಯಾಡ್ ಸಂಸ್ಥೆಯ ಸಂಸ್ಥಾಪಕ ಮಂಜುನಾಥರೆಡ್ಡಿ, ಪತ್ನಿಪ್ರತಿಮಾರೆಡ್ಡಿ ಹಾಗೂ ತಂಡ ಈ ಕಾರ್ಯವನ್ನು ಅಚ್ಚುಕಟ್ಟಾಗಿ ನೆರವೇರಿಸುವ ಮೂಲಕ ನೂತನ ದಾಖಲೆಯನ್ನು ನಿರೂಪಿಸಿದ್ದಾರೆ.



ಚಳ್ಳಕೆರೆ ವಿಧಾನಸಭಾಕ್ಷೇತ್ರದ ತುರುವನೂರು ಗ್ರಾಮದಲ್ಲಿ ಬಿಡಿಸಿದ ಆಂಜನೇಯಸ್ವಾಮಿ ರೇಖಾಚಿತ್ರಕ್ಕೆ ಗ್ಲೋಬಲ್ ವರ್ಲ್ಡ್ ರೆಕಾರ್ಡ್ ಸಂದ ಹಿನ್ನೆಲೆಯಲ್ಲಿ ಮುಖ್ಯಮಂತ್ರಿಯವರನ್ನು ಅಭಿನಂದಿಸಲಾಯಿತು.

**ಪ್ರಮುಖ ಸುದ್ದಿ**

# ಭಕ್ತಶ್ರೇಷ್ಠೆ ಹೇಮರೆಡ್ಡಿಮಲ್ಲಮ್ಮನವರ ಆದರ್ಶ ಜೀವನದಲ್ಲಿ ಅಳವಡಿಸಿಕೊಂಡು ಪ್ರಗತಿಯತ್ತ ಹೆಜ್ಜೆ ಇಡಿ: ರಘುಮೂರ್ತಿ

» **ಚಳ್ಳಕೆರೆ**

ಈ ನಾಡು ಕಂಡ ಅಪ್ರತಿಮ ದಾರ್ಶನಿಕಿ, ಶ್ರೀಶೈಲ ಜಗದ್ಗುರು ಅನುಗ್ರಹಿಸಿದ ಮಹಾನ್ ಭಕ್ತಶ್ರೇಷ್ಠೆ ಹೇಮರೆಡ್ಡಿಮಲ್ಲಮ್ಮ ಕಡುಬಡತನದಲ್ಲಿ ಜನಿಸಿದರೂ ಮಹಿಳೆಯರ ಪಾವಿತ್ರತೆಯ ಮೌಲ್ಯವನ್ನು ಸಾರಿಹೇಳಿದ ಮಹಾನ್ ಮಹಿಳೆ ಎಂದು ಶಾಸಕ, ಸಣ್ಣಕೈಗಾರಿಕೆ ಅಭಿವೃದ್ಧಿ ನಿಗಮ ಅಧ್ಯಕ್ಷ ಟಿ.ರಘುಮೂರ್ತಿ ತಿಳಿಸಿದರು.

ಅವರು, ಶನಿವಾರ ತಾಲ್ಲೂಕು ಕಚೇರಿ ಸಭಾಂಗಣದಲ್ಲಿ ಹೇಮರೆಡ್ಡಿಮಲ್ಲಮ್ಮ ಜಯಂತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು. ಪ್ರತಿಯೊಂದು ಸಮುದಾಯದಲ್ಲೂ ಅವರದ್ದೆಯಾದ ಜಾತಿಅಭಿಮಾನವಿರುತ್ತದೆ. ಆದರೆ, ಹೇಮರೆಡ್ಡಿಮಲ್ಲಮ್ಮ ಜಾತಿಕಟ್ಟಳೆಗಳನ್ನು ಮೀರಿ ನಿಂತು ಸಮಾಜದಲ್ಲಿ ಮಹಿಳೆಯರ ಮೌಲ್ಯವನ್ನು ಪ್ರತಿಪಾದಿಸುವ ಗೃಹಿಣಿಯಪಾವಿತ್ರ್ಯೆಯ ಬಗ್ಗೆ ಸಾರಿ, ಸಾರಿ ಹೇಳಿದ್ದಾರೆ. ನಾವೆಲ್ಲರೂ ಹೇಮರೆಡ್ಡಿಮಲ್ಲಮ್ಮನವರ ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳೋಣ.



ರೆಡ್ಡಿಸಮುದಾಯದ ಮಹಿಳೆಯರು ಹೇಮರೆಡ್ಡಿಮಲ್ಲಮ್ಮ ಭವನ ನಿರ್ಮಾಣಕ್ಕೆ ನಿವೇಶನ ನೀಡುವಂತೆ ಅರ್ಜಿಸಲ್ಲಿಸಿದರು. ಕೂಡಲೇ ಶಾಸಕರು ತಹಶೀಲ್ದಾರ್, ಇಒ ಮತ್ತು ಪೌರಾಯುಕ್ತರಿಗೆ ನಗರಸಭೆಯಿಂದ ನಿವೇಶನ ಮಂಜೂರು ಮಾಡುವ ಕುರಿತು ಮಾಹಿತಿ ನೀಡುವಂತೆ ಸೂಚನೆ ನೀಡಿದರು.

ಪ್ರಾಸ್ತಾವಿಕವಾಗಿ ಮಾತನಾಡಿದ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಎಚ್.ಶಶಿಧರ, ಸರ್ಕಾರ ಎಲ್ಲಾ ಸಮುದಾಯಗಳು ಆಚರಣೆ ಮಾಡುವಂತಹ ಅನೇಕ ಮಹಾನೀಯರ ಜಯಂತಿಗಳನ್ನು ರಾಷ್ಟ್ರೀಯ ಹಬ್ಬ ಆಚರಣಾ ಸಮಿತಿವ್ಯಾಪ್ತಿಗೆ ಒಳಪಡಿಸಿದೆ. ವರ್ಷಕ್ಕೆ 40 ಜಯಂತಿ ಗಳನ್ನು ಆಚರಿಸಲಾಗುತ್ತಿದೆ. ಎಲ್ಲಾ ಜಯಂತಿಗಳಿಗೆ ವಿಭಿನ್ನವಾಗಿ ಹೇಮರೆಡ್ಡಿಮಲ್ಲಮ್ಮ ಜಯಂತಿ ನಮ್ಮಕಣ್ಣಮುಂದಿದೆ. ಕಾರಣ, ಹೇಮರೆಡ್ಡಿಮಲ್ಲಮ್ಮ ಸಾತ್ವಿಕ ಬದುಕಿನ ಮುನ್ನುಡಿ ಎಂದರು.

ಕಾರ್ಯಕ್ರಮವನ್ನು ಉದ್ದೇಶಿಸಿ ರೆಡ್ಡಿಸಮಾಜದ ಅಧ್ಯಕ್ಷ ರಘುರೆಡ್ಡಿ, ನಗರಸಭೆ ಅಧ್ಯಕ್ಷೆ ಆರ್.ಮಂಜುಳಾ, ಉಪಾಧ್ಯಕ್ಷೆ ಕವಿತಾ ಮಾತನಾಡಿದರು. ತಹಶೀಲ್ದಾರ್ ರೇಹಾನ್ಪಾಷ, ತಾಲ್ಲೂಕು ಗ್ಯಾರಂಟಿ ಸಮಿತಿ ಅಧ್ಯಕ್ಷ ಗದ್ದಿಗೆತಿಪ್ಪೇಸ್ವಾಮಿ, ರೆಡ್ಡಿಸಮಾಜದ ಮುಖಂಡ ದಿನೇಶ್‌ರೆಡ್ಡಿ, ತಿಮ್ಮಾರೆಡ್ಡಿ, ರೆಡ್ಡಿಸಮುದಾಯದ ಮಹಿಳಾ ಸಂಘಟನೆ ಮುಖಂಡರು, ನಗರಸಭಾ ಸದಸ್ಯರಾದ ರಮೇಶಗೌಡ, ಕೆ.ವೀರಭದ್ರಪ್ಪ, ಸುಮ, ನಾಮಿನಿ ಸದಸ್ಯ ನೇತಾಜಿ, ಕೆಡಿಪಿ ಸದಸ್ಯ ಸುರೇಶ್, ಮುಖಂಡರಾದ ನಾಗೇಂದ್ರಪ್ಪ, ಬೊಪ್ಪಣ್ಣ, ಆರ್.ಪ್ರಸನ್ನಕುಮಾರ್, ಕಂದಯಾಧಿಕಾರಿ ತಿಪ್ಪೇಸ್ವಾಮಿ, ಗ್ರಾಮಲೆಕ್ಕಿಗ ಪ್ರಕಾಶ್, ಡಿ.ಶ್ರೀನಿವಾಸ್ ಮುಂತಾದವರು ಉಪಸ್ಥಿತರಿದ್ದರು.

# ಕೇಂದ್ರ ಹಾಗೂ ರಾಜ್ಯ ಸರ್ಕಾರ ಜನವಿರೋಧಿ ನೀತಿ ಖಂಡಿಸಿ 14ರಂದು ಬೆಂಗಳೂರಿನಲ್ಲಿ ಹೋರಾಟ

» **ಚಿತ್ರದುರ್ಗ**

ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ಜನ ವಿರೋಧಿ ನೀತಿಯನ್ನು ಖಂಡಿಸಿ ಸೋಷಲಿಸ್ಟ್ ಯೂನಿಟ್ ಸೆಂಟರ್ ಆಫ್ ಇಂಡಿಯಾ(ಕಮ್ಯುನಿಸ್ಟ್) ವತಿಯಿಂದ

ಮೇ.14 ರಂದು ಬೆಂಗಳೂರಿನ ಫ್ರೀಡಂ ಪಾರ್ಕಿನಲ್ಲಿ ಬೃಹತ್ ಹೋರಾಟ ಹಮ್ಮಿಕೊಳ್ಳಲಾಗಿದೆ ಎಂದು ರವಿಕುಮಾರ್ ತಿಳಿಸಿದರು.

ಪ್ರವಾಸಿಮಂದಿರದಲ್ಲಿಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ಶಿಕ್ಷಣ, ಆರೋಗ್ಯ, ಉದ್ಯೋಗ ನೀಡುವಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ವಿಫಲವಾಗಿದ್ದು, ಯುವ ಜನಾಂಗಕ್ಕೆ ದ್ರೋಹವೆಸಗುತ್ತಿವೆ. ಪ್ರತಿ ಪ್ರಜೆಯಿಂದಲೂ ತೆರಿಗೆ ವಸೂಲು ಮಾಡುತ್ತಿರುವ ಸರ್ಕಾರಗಳು ಮೂಲಭೂತ ಸೌಲಭ್ಯಗಳನ್ನು ನೀಡಬೇಕೆಂಬುದನ್ನು ಮರೆತಂತಿದೆ. ಪ್ರಧಾನಿ ಮೋದಿರವರ ಅಚ್ಛೆದಿನ್‌ಗಳಿಂದ



ಯಾವುದೇ ಪ್ರಯೋಜನವಿಲ್ಲ. ರೈತರು, ಕಾರ್ಮಿಕರು, ಯುವಕ–ಯುವತಿಯರು, ವಿದ್ಯಾರ್ಥಿಗಳು, ಜನಸಾಮಾನ್ಯರು ಅಗತ್ಯ ವಸ್ತುಗಳ ಬೆಲೆ ಏರಿಕೆಯಿಂದ ಜೀವಿಸಲು ಆಗದೆ ಕಷ್ಟ ಪಡುವಂತಾಗಿದೆ. ಹಾಗಾಗಿ ಆಳುವ ಸರ್ಕಾರಗಳನ್ನು ಎಚ್ಚರಿಸುವುದಕ್ಕಾಗಿ ನಡೆಯಲಿರುವ ಬೃಹತ್ ಹೋರಾಟದಲ್ಲಿ ಪ್ರತಿ ಜಿಲ್ಲೆಗಳಿಂದಲೂ ಎಸ್.ಯು.ಸಿ.ಐ–ಸಿ. ಪದಾಧಿಕಾರಿಗಳು ಪಾಲ್ಗೊಳ್ಳುತ್ತಿದ್ದು, ಹತ್ತು ಸಾವಿರಕ್ಕೂ ಹೆಚ್ಚು ಜನ ಭಾಗವಹಿಸುವ ನಿರೀಕ್ಷೆಯಿದೆ ಎಂದು ಹೇಳಿದರು.

ಎಸ್.ಯು.ಸಿ.ಐ–ಸಿ. ರಾಜ್ಯ ಸಮಿತಿಯ ಎಂ.ಎನ್.ಮಂಜುಳ ಮಾತನಾಡಿ ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದು ಎರಡು ವರ್ಷಗಳಾಗಿದ್ದು, ಬೆಲೆ ಏರಿಕೆಯೇ ಸಾಧನೆಯಾಗಿದೆ. ದಿನನಿತ್ಯ ಬಳಕೆಯ ವಸ್ತುಗಳ ಬೆಲೆ ದುಬಾರಿಯಾಗಿದೆ. ಉಚಿತ ಗ್ಯಾರೆಂಟಿಗಳಿಗೆ ಹಣ ಹೊಂದಿಸಲು ಆಗದ ರಾಜ್ಯ ಸರ್ಕಾರ ಜನಸಾಮಾನ್ಯರ ಮೇಲೆ ಹೊರೆ ಹೇರುತ್ತಿದೆ. ಪೆಟ್ರೋಲ್ ಬೆಲೆ ಏರಿಕೆಯಿಂದ ಸಾಮಾನ್ಯವಾಗಿ ಬಸ್ ಪ್ರಯಾಣ, ವಾಹನಗಳ ಬಿಡಿ ಭಾಗಗಳ ಬೆಲೆಯೂ ಜಾಸ್ತಿಯಾಗುತ್ತಿದೆ. ಸಚಿವ–ಶಾಸಕರುಗಳ ವೇತನ ಹೆಚ್ಚಳ ಮಾಡಿಕೊಂಡಿರುವ ರಾಜ್ಯ ಸರ್ಕಾರಕ್ಕೆ ಜನಸಾಮಾನ್ಯರ ಕಷ್ಟ ಏನು ಎಂಬುದು ಗೊತ್ತಾಗುತ್ತಿಲ್ಲ. ಅದಕ್ಕಾಗಿ ರಾಜ್ಯ ಮತ್ತು ಕೇಂದ್ರ ಸರ್ಕಾರಗಳನ್ನು ಎಚ್ಚರಿಸುವುದಕ್ಕಾಗಿ ಮೇ.14 ರಂದು ಬೆಳಿಗ್ಗೆ 10–30 ಕ್ಕೆ ಸ್ವಾತಂತ್ರ್ಯ ಉದ್ಯಾನವನದಲ್ಲಿ ಬೃಹತ್ ಪ್ರತಿಭಟನೆ ಹಮ್ಮಿಕೊಂಡಿದ್ದು, ರಾಜ್ಯದ ಎಲ್ಲಾ ಜಿಲ್ಲೆಗಳಿಂದ ಜನ ಪಾಲ್ಗೊಳ್ಳಲಿದ್ದಾರೆಂದರು.

ಅಂಗನವಾಡಿ ಕಾರ್ಯಕರ್ತೆಯರು, ಸಹಾಯಕಿಯರು ಜೀವನ ಭದ್ರತೆಯಿಲ್ಲದೆ ದುಡಿಯುತ್ತಿದ್ದಾರೆ. ಬಾಣಂತಿಯರ ಸಾವು ಜಾಸ್ತಿಯಾಗುತ್ತಿದೆ. ಆರುವರೆ ಸಾವಿರ ಸರ್ಕಾರಿ ಶಾಲೆಗಳು ರಾಜ್ಯದಲ್ಲಿ ಮುಚ್ಚಿರುವುದು ನೋವಿನ ಸಂಗತಿ. ಉದ್ಯಮಿಗಳು, ಬಂಡವಾಳಶಾಹಿಗಳ ಪರವಾಗಿರುವ ಸರ್ಕಾರಗಳಿಂದ ಹಣವಿಲ್ಲದವರು ಬದುಕುವುದು ಕಷ್ಟವಾಗಿದೆ. ಹನ್ನೊಂದಕ್ಕೂ ಹೆಚ್ಚು ಬೇಡಿಕೆಗಳನ್ನಿಟ್ಟುಕೊಂಡು ನಡೆಸುತ್ತಿರುವ ಹೋರಾಟದಲ್ಲಿ ಜಿಲ್ಲೆಯಿಂದ ಹೆಚ್ಚಿನ ಜನ ಭಾಗವಹಿಸುವಂತೆ ಮನವಿ ಮಾಡಿದರು.

ಸುಜಾತ, ಕುಮುದ ಇವರುಗಳು ಪತ್ರಿಕಾಗೋಷ್ಠಿಯಲ್ಲಿ ಉಪಸ್ಥಿತರಿದ್ದರು.

# ವಿದ್ಯಾರ್ಥಿಗಳಿಗೆ ಚಾರಣದ ಮೂಲಕ ಕಲಿಕೆ

» **ಚಿತ್ರದುರ್ಗ**

ನಗರದ ಸಹ್ಯಾದ್ರಿ ಇಂಗ್ಲಿಷ್ ಅಕಾಡೆಮಿ ವತಿಯಿಂದ ಇಂದು ವಿದ್ಯಾರ್ಥಿಗಳಿಗೆ ಚಾರಣದ ಮೂಲಕ ಕಲಿಕೆ ಎಂಬ ಶೀರ್ಷಿಕೆಯಡಿ ಸುಮಾರು 80 ವಿದ್ಯಾರ್ಥಿಗಳಿಗೆ ಜೋಗಿಮಟ್ಟಿ ಅರಣ್ಯದ ಹಿಮ್ಮತ್ ಕೇದಾರಗಿರಿಗೆ ಚಾರಣ ಆಯೋಜನೆ ಮಾಡಲಾಗಿತ್ತು.

ಸಹ್ಯಾದ್ರಿ ಇಂಗ್ಲಿಷ್ ಅಕಾಡೆಮಿಯ ಅಧ್ಯಕ್ಷರಾದ ಯೋಗೀಶ್ ಸಹ್ಯಾದ್ರಿ ಅವರು ಚಾರಣದ ನೇತೃತ್ವ ವಹಿಸಿದ್ದು, ವಿದ್ಯಾರ್ಥಿಗಳ ಕಲಿಕೆ ಕೇವಲ ನಾಲ್ಕು ಗೋಡೆಗಳ ಮಧ್ಯೆ ಮಾತ್ರವಲ್ಲದೆ ಪ್ರಕೃತಿಯ ನಡುವೆ ಅಪಾರವಾದ ವಿಷಯ ಸಂಪತ್ತನ್ನು ಗಳಿಸಿಕೊಳ್ಳಲು ಸಾಧ್ಯವಿದೆ ಎಂದು ಮಕ್ಕಳಿಗೆ ತಿಳಿಸಿದರು. ಜಿಲ್ಲೆಯ ವಿದ್ಯಾರ್ಥಿಗಳಿಗಾಗಿ ಆಯೋಜನೆ ಮಾಡಲಾಗಿದ್ದ ಸ್ಪೋಕನ್ ಇಂಗ್ಲಿಷ್ ಬೇಸಿಗೆ ಶಿಬಿರವು ಮುಕ್ತಾಯವಾದ ಹಿನ್ನೆಲೆಯಲ್ಲಿ ಮಕ್ಕಳು ಹಾಗೂ ಆಸಕ್ತ ಪೋಷಕರು ಚಾರಣದಲ್ಲಿ ಭಾಗವಹಿಸಿದ್ದರು. ವಿವಿಧ ತರಗತಿಗಳ ವಿದ್ಯಾರ್ಥಿಗಳು ಭಾಗವಹಿಸಿದ್ದು ಚಾರಣದಲ್ಲಿ, ಅರಣ್ಯ ಇಲಾಖೆಯ ಸಿಬ್ಬಂದಿ ಶರಣ್ ಅವರು ಹಲವು ಪ್ರಾಣಿ ಪಕ್ಷಿಗಳ ಬಗ್ಗೆ ಮಾಹಿತಿ ನೀಡಿದರು. ನಿಸರ್ಗ ಹಾಗೂ ಮಾನವನ ಸೌಹಾರ್ದತೆ



ಕುರಿತು ಮಕ್ಕಳಿಗೆ ತಿಳಿಸಿದರು.

ಕರುನಾಡ ವಿಜಯಸೇನೆ ಜಿಲ್ಲಾಧ್ಯಕ್ಷ ಶಿವಕುಮಾರ್ ಭಾಗವಹಿಸಿ ಮಾತನಾಡಿ, ಇಂದಿನ ಮಕ್ಕಳಿಗೆ ಪ್ರಕೃತಿ ಪ್ರೇಮದ ಕುರಿತು ಅರಿವು ಮೂಡಿಸುವ ಅಗತ್ಯವಿದೆ. ಪುಸ್ತಕಗಳ ಅಭ್ಯಾಸದ ಜೊತೆ ಜೊತೆಗೆ ಮಕ್ಕಳು ನಿಸರ್ಗ ಪ್ರೇಮವನ್ನು ಬೆಳೆಸಿಕೊಳ್ಳಬೇಕಿದೆ ಹಾಗೂ ಈ ನಿಟ್ಟಿನಲ್ಲಿ ಸಹ್ಯಾದ್ರಿ ಇಂಗ್ಲಿಷ್ ಅಕಾಡೆಮಿಯ ಅಧ್ಯಕ್ಷರಾದ ಯೋಗೀಶ್ ಸಹ್ಯಾದ್ರಿ ಅವರ ಕಾರ್ಯ ಶ್ಲಾಘನೀಯವಾದುದು ಎಂದು ಅಭಿಪ್ರಾಯಪಟ್ಟರು. ಚಾರಣ ಹಾಗೂ ಸ್ಪೋಕನ್ ಇಂಗ್ಲಿಷ್ ಬೇಸಿಗೆ ಶಿಬಿರವನ್ನು ಕುರಿತು ಪೋಷಕರಾದ ಲಾಯರ್ ಚಂದ್ರಶೇಖರ್ ಹಾಗೂ ಮಧು ಮಾತನಾಡಿದರು. ವಿದ್ಯಾರ್ಥಿಗಳು ಹಾಗೂ ಅನೇಕ ಪೋಷಕರು ಚಿತ್ರದುರ್ಗದ ಹೆಮ್ಮೆಯ ಜೋಗಿಮಟ್ಟಿ ಅರಣ್ಯದ ಸೌಂದರ್ಯವನ್ನು ಸವಿದು ಸಂತೋಷ ವ್ಯಕ್ತಪಡಿಸಿದರು.

# ಯೋಧರಿಗೆ ಶಕ್ತಿ ಕೊಡುವಂತೆ ಮುಸ್ಲಿಂರಿಂದ ಪ್ರಾರ್ಥನೆ

» **ಚಿತ್ರದುರ್ಗ**

ಪಹಲ್ಗಾಮ್‌ನಲ್ಲಿ ಉಗ್ರರು ಗುಂಡಿನ ದಾಳಿ ನಡೆಸಿ 26 ಮಂದಿ ಅಮಾಯಕರನ್ನು ಹತ್ಯೆಗೈದಿರುವುದಕ್ಕೆ ಪ್ರತೀಕಾರವಾಗಿ ನಮ್ಮ ದೇಶದ ಸೈನಿಕರು ಉಗ್ರರ ತಂಗುದಾಣಗಳನ್ನು ನಾಶಪಡಿಸಿದ್ದು, ಭಯೋತ್ಪಾದಕರನ್ನು ಸದೆ ಬಡಿಯಲಿ ಎಂದು ಮುಸ್ಲಿಂರು ಬಡಾಮಕಾನ್‌ನ ದರ್ಗಾದಲ್ಲಿ ಶನಿವಾರ ಪ್ರಾರ್ಥನೆ ಸಲ್ಲಿಸಿದರು.

ಸೈಯದ್ ಮೊಹಿದ್ದೀನ್(ಚೋಟು) ಮಾತನಾಡಿ ಭಾರತದ ಯೋಧರಿಗೆ ಉಗ್ರರನ್ನು ಸದೆಬಡಿಯುವಂತ ಶಕ್ತಿ ಕೊಡಲಿ. ಭಾರತದಲ್ಲಿ ಹುಟ್ಟಿ ಇಲ್ಲಿನ ಅನ್ನ, ನೀರು, ಗಾಳಿ ಸೇವಿಸುತ್ತಿರುವ ನಾವುಗಳು ಇಂತಹ ಸಂದರ್ಭದಲ್ಲಿ ದೇಶಕ್ಕಾಗಿ ಪ್ರಾಣ ತ್ಯಾಗ ಮಾಡಲು ಸಿದ್ದರಿದ್ದೇವೆ. ಬೇರೆ ಧರ್ಮವನ್ನು ಪ್ರೀತಿಸುವುದು ಇಸ್ಲಾಂ ಧರ್ಮದ ಧ್ಯೇಯ. ಉಗ್ರಗಾಮಿಗಳು ಇಸ್ಲಾಂಮಿಗಳಲ್ಲ. ಮಾನವ ಕುಲಕ್ಕೆ ಕಂಟಕವಾಗಿರುವ ಉಗ್ರರನ್ನು ಯಾವುದೇ ಕಾರಣಕ್ಕೂ ಕ್ಷಮಿಸುವುದಿಲ್ಲ. ನಮ್ಮ ದೇಶದ ಪ್ರಧಾನಿ ಮೋದಿರವರು ಸಿಂಧೂರ ಆಪರೇಷನ್‌ನಿಂದ ಹಿಂದೆ ಸರಿಯಬಾರದು.



ಭಾರತವನ್ನು ಕೆಣಕಿದ ವಿರೋಧಿ ದೇಶ ಪಾಕಿಸ್ತಾನಕ್ಕೆ ತಕ್ಕ ಪಾಠ ಕಲಿಸಬೇಕೆಂದರು. ಧರ್ಮಗುರುಗಳಾದ ಸೈಯದ್ ಶಬ್ಬೀರ್ ಅಶ್ರಫಿ, ತಬ್ರೇಜ್, ಸೈಯದ್ ನೂರ್ ಅಹಮದ್, ಮಹಮದ್ ಯಾಸಿನ್, ಮಹ್ಮದ್ ಸಮೀ, ಸೈಯದ್ ಅಜರ್ ಪ್ರಾರ್ಥನೆಯಲ್ಲಿದ್ದರು.

# ಈಚಘಟ್ಟದಲ್ಲಿ 2 ದಿನಗಳ ಬಸವಣ್ಣ ಜಯಂತಿ ಉತ್ಸವಕ್ಕೆ ಚಾಲನೆ



» **ಹೊಳಲ್ಕೆರೆ/ ಚಿತ್ರದುರ್ಗ**

ಪ್ರತಿಯೊಬ್ಬರೂ ದುಡಿದು ತಿನ್ನಬೇಕೆಂಬುದು ಬಸವಣ್ಣನವರು ಬೋಧಿಸಿದ ಕಾಯಕ ತತ್ವವನ್ನು ಮತ್ತವರ ವಿಚಾರಧಾರೆಗಳನ್ನು ಗ್ರಾಮೀಣ ಭಾಗದ ಜನ ಹೆಚ್ಚಾಗಿ ಅರ್ಥಮಾಡಿಕೊಂಡು ನಡೆಯಬೇಕಾಗಿದೆ. ಅಂತಹ ವಾತಾವರಣ ನಮ್ಮ ಹಿರಿಯರು ಈಗಿನ ಕಿರಿಯರಿಗೆ ಬಸವಣ್ಣನವರ ವಿಚಾರ ಮತ್ತಿತರ ಧಾರ್ಮಿಕ ತತ್ವಗಳನ್ನು ಬೋಧಿಸುತ್ತಾ ಸಾಗಬೇಕಾಗಿದೆ ಎಂದು ಈಚಘಟ್ಟ ಪಂಚಾಯತಿ ಮಾಜಿ ಉಪಾಧ್ಯಕ್ಷ ಯು.ಎಸ್ ತಿಪ್ಪೇಸ್ವಾಮಿ ಅವರು ವಿನಂತಿ ಮಾಡಿದರು.

ಅವರು ತಾಲೂಕಿನ ಈಚಘಟ್ಟ ಗ್ರಾಮದಲ್ಲಿ ಇಂದಿನಿಂದ ಎರಡು ದಿನಗಳ ಕಾಲ ಮಹಾ ಮಾನವತಾವಾದಿ, ವಿಶ್ವಗುರು, ಸಾಂಸ್ಕೃತಿಕ ನಾಯಕ ಬಸವಣ್ಣನವರ ಜಯಂತಿ ಪ್ರಯುಕ್ತ ಗ್ರಾಮದ ಸುತ್ತಮುತ್ತಲಿನ ಹಳ್ಳಿಗಳಿಗೆ ಪ್ರಚಾರಕ್ಕೆ ಹೊರಟಿರುವ ಪ್ರಚಾರ ವಾಹನದ ಮೇಲೆ ಇಟ್ಟಿದ್ದ ಬಸವಣ್ಣನವ ಪ್ರತಿಮೆಗೆ ಪುಷ್ಪವೃಷ್ಟಿ ಮಾಡಿ ಚಾಲನೆ ನೀಡಿ ಮಾತನಾಡಿದ ಅವರು ಗ್ರಾಮಗಳಲ್ಲಿ ಧಾರ್ಮಿಕ ವಾತಾವರಣವಿದ್ದರೆ ಅಲ್ಲಿ ಸದ್ಭಕ್ತಿ, ಮೂಡಿ ಸದಾಚಾರ ,ಸನ್ನಡತೆ ಇರಲು ಸಾಧ್ಯವಿದೆ ಎಂದರು.

ಗ್ರಾಮದ ವೀರಭದ್ರೇಶ್ವರ ಅಭಿವೃದ್ಧಿ ಸೇವಾ ಸಮಿತಿ ಕಾರ್ಯದರ್ಶಿ ಯು.ಎಸ್. ಉಜ್ಜಿನ ಸ್ವಾಮಿ ಮಾತನಾಡಿ ಗ್ರಾಮದಲ್ಲಿ ಬಸವಣ್ಣನವರ ಜಯಂತೋತ್ಸವದ ಹಿನ್ನೆಲೆಯಿಂದ ಹಬ್ಬದ ವಾತಾವರಣ ಮನೆ ಮಾಡಿದೆ. ಎರಡು ದಿನಗಳ ಕಾಲ ಬಸವಣ್ಣನವರ ಜಯಂತಿ ನಿಮಿತ್ತ ವಿವಿಧ ಸಾ0ಸ್ಕೃತಿಕ, ಸಾಹಿತ್ಯಿಕ ವಿಚಾರಗಳ ಜೊತೆಗೆ ವಚನ ಕಂಠಪಾಠ ಹಾಗೂ ರಂಗೋಲಿ ಸ್ಪರ್ಧೆಗಳನ್ನು ಏರ್ಪಡಿಸಲಾಗಿದೆ.ನಮ್ಮ ಸಮಾರಂಭಕ್ಕೆ ಬೇರೆ ಗ್ರಾಮಗಳವರು ಬರಲಿ ಎಂದು ಆಮಂತ್ರಣ ನೀಡಿ ,ಪ್ರಚಾರಕ್ಕಾಗಿ ಈ ವಾಹನದಲ್ಲಿ ಬಸವಣ್ಣನವರ ಮೂರ್ತಿಯನ್ನು ಇಟ್ಟು ಕರಪತ್ರ ಹಂಚುತ್ತ ವಾಹನದಲ್ಲಿ ವಚನಗಳನ್ನು ಆಡಿಸುತ್ತಾ ಪ್ರಚಾರ ಮಾಡಲಾಗುತ್ತದೆ ಎಂದರು. ಗ್ರಾಮದ ರೈತ ಮುಖಂಡ ಸಿ.ಡಿ ಕರಿಬಸಪ್ಪ ಮಾತನಾಡಿ ಗ್ರಾಮ ಒಗ್ಗಟ್ಟಾಗಿರಲು ಹಿರಿಯರ ಹಾಗೂ ಸ್ವಾಮಿಗಳಂತವರ ಮಾತು ಅವಶ್ಯಕತೆ ಇದೆ. ಯುವಕರಿಗೆ ಧಾರ್ಮಿಕ ಸಮಾರಂಭಗಳ ಅವಶ್ಯಕತೆ ಇದೆ. ಅದರಿಂದ ಸನ್ಮಾರ್ಗದತ್ತ ನಡೆಯಲು ಅವಕಾಶವಾಗುತ್ತದೆ ಎಂದರು. ಈ ಸಂದರ್ಭದಲ್ಲಿ ಗ್ರಾಮದ ಮುಖಂಡರುಗಳಾದ ಮೂಲೆಮನೆ ವೀರೇಶ್, ಡಿ.ಎಂ. ವೀರಭದ್ರಪ್ಪ ,ನಾಗರಾಜ ಸೇರಿದಂತೆ ವಿದ್ಯಾರ್ಥಿಗಳು ಹಾಗೂ ಯುವಕರು ಸೇರಿ ಪ್ರಚಾರ ವಾಹನಕ್ಕೆ ಸಹಕರಿಸಿದರು.

**ಪ್ರಮುಖ ಸುದ್ದಿ**

### ಅತ್ಯಂತ ವೈಭವಯುತವಾಗಿ ಧಾರ್ಮಿಕ ವಿಧಿ ವಿಧಾನಗಳ ಪ್ರಕಾರ ನಡೆದವು

# ಹೊಸದುರ್ಗದಲ್ಲಿ ವೈಭವದ ಶ್ರೀ ವಾಸವಿ ಜಯಂತಿ

» **ಹೊಸದುರ್ಗ**

ಪಟ್ಟಣದ ಆರ್ಯ ವೈಶ್ಯ ಮಂಡಳಿಯವರ ವತಿಯಿಂದ ಶ್ರೀ ಗಿರಿಜಾ ಕಲ್ಯಾಣ ಮಹೋತ್ಸವ ಮತ್ತು ಪ್ರತಿಷ್ಠಾಪನೆ ವಾರ್ಷಿಕೋತ್ಸವ ಹಾಗೂ ಶ್ರೀ ವಾಸವಿ ಜಯಂತಿ ಮಹೋತ್ಸವ ಕಾರ್ಯಕ್ರಮಗಳು ಅತ್ಯಂತ ವೈಭವಯುತವಾಗಿ ಧಾರ್ಮಿಕ ವಿಧಿ ವಿಧಾನಗಳ ಪ್ರಕಾರ ನಡೆದವು.

44 ನೇ ವರ್ಷದ ವಾರ್ಷಿಕೋತ್ಸವ ಹಾಗೂ 11 ನೇ ವರ್ಷದ ಗಿರಿಜಾ ಕಲ್ಯಾಣ ಮಹೋತ್ಸವ ಕಾರ್ಯಕ್ರಮದಲ್ಲಿ ಎಲ್ಲಾ ದೇವರುಗಳಿಗೆ ಪಂಚಮೃತ ಅಭಿಷೇಕ,ಶ್ರೀಗಣಪತಿ ಹೋಮ,ನವಗ್ರಹ ಹೋಮ,ಶ್ರೀವಾಸವಿ ಅಮ್ಮನವರ ಹೋಮ,ಶ್ರೀನಗರೇಶ್ವರಸ್ವಾಮಿಯವರಿಗೆ ಬುತಿ ಸೇವೆ,ಉಪಹಾರ,ಪೂರ್ಣಾಹುತಿ,ಅಷ್ಠಾವಧಾನ ಸೇವೆ,ಮಹಾಮಂಗಳಾರತಿ,ತೀರ್ಥ ಪ್ರಸಾದ ವಿನಿಯೋಗ,ಗಿರಿಜಾಕಲ್ಯಾಣ ಮಹೋತ್ಸವ, ಉಡಿಹಕ್ಕಿ ಕಾರ್ಯಕ್ರ,ಮಂಗಳದ್ರವ್ಯ ವಿತರಣಾ ಕಾರ್ಯಕ್ರಮ,ಸಂಜೆ ವಿಶೇಷ ಸಾಂಸ್ಕೃತಿ ಕಾರ್ಯಕ್ರಮಗಳು ಎಲ್ಲಾ ದೇವರುಗಳಿಗೆ



ಅಭೀಷೇಕ, ನಡೆದವು.

ಸಂಜೆ ಅತ್ಯಾಕರ್ಷಕ ವಿದ್ಯುತ್ ದೀಪಾಲಂಕೃತ ಮುತ್ತಿನ ಪಲ್ಲಕ್ಕಿಯಲ್ಲಿ ಶ್ರೀ ವಾಸವಿ ಕನ್ನಿಕಾ ಪರಮೇಶ್ವರಿ ಅಮ್ಮನವರ ರಾಜಬೀದಿ ಉತ್ಸವ ಪ್ರಟ್ಟಣದ ಪ್ರಮುಖ ರಸ್ತೆಗಳಲ್ಲಿ ವೈಭವದ ಮೆರವಣಿಗೆ ನಡೆಯಿತು.ಮೂಡುಬಿದರೆಯ ಸುಪ್ರಸಿದ್ಧ ಲಕ್ಷ್ಮೀಶ ತಂಡದವರಿಂದ ವಿಶೇಷ ಚಂಡೆಮೇಳ ಪ್ರದರ್ಶನ ಹಾಗೂ ನಾಸಿಕ್ ಡೋಲು,ಕರಡಿಮೇಳ, ಮಂಗಳವಾದ್ಯ ಕಣ್ಮನ ಸೆಳೆಯಿತು.

ಮೆರವಣಿಗೆ ಸಂಧರ್ಬದಲ್ಲಿ ಆರ್ಯವೈಶ್ಯ ಮಂಡಳಿಯ ಅಧ್ಯಕ್ಷ ಬಿ.ಎನ್.ಜಯಪ್ರಕಾಶ್, ಉಪಾಧ್ಯಕ್ಷ ಎನ್.ಫಣಿರಾಜ್, ಉದ್ಯಮಿ ಸದ್ಗುರು ಪ್ರದೀಪ್ ಡಿ.ಎಸ್.ಪುರಸಭಾ ಸದಸ್ಯೆ ಡಾ:ಸ್ವಾತಿಪ್ರದೀಪ್,ಕುಶಕುಮಾರ್,ಎನ್. ವಸಂತಶೆಟ್ಟಿ, ಬಿ.ಎಲ್.ಲಕ್ಷ್ಮೀನಾರಾಯಣ ಶೆಟ್ಟಿ, ಆರ್.ಗಂಗಾಧರಗುಪ್ತ, ಬಿ.ಎನ್. ರಾಜಶೇಖರ್‌ಶೆಟ್ಟಿ, ನಾಗಶೇಖರ,ವಾಸಕಿ,ಹರೀಶ್,ಪ್ರಕಾಶ್,ವಿಜಯ್,ವಿಕ್ರಮ್,ಕಾಂತರಾಜ್ ಸೇರಿದಂತೆ ಸಮಾಜದ ಮುಖಂಡರುಗಳು,ಯುವಕರು,ಯುವತಿಯರು ಯುವ ಘಟಕದ ಪದಾಧಿಕಾರಿಗಳು,ಶ್ರೀ ವಾಸವಿ ಯುವಜನ ಸಂಘದ ಪದಾಧಿಕಾರಿಗಳು, ವಾಸವಿ ಮಹಿಳಾ ಮಂಡಳಿಯ ಪದಾಧಿಕಾರಿಗಳು ಭಾಗವಹಿಸಿದ್ದರು.

## ಫಾಸ್ಟ್ ನ್ಯೂಸ್

### ವೀರಭದ್ರಸ್ವಾಮಿ ಉತ್ಸವ ಮೂರ್ತಿ ಪ್ರತಿಷ್ಠಾಪನೆ

» **ಚಿತ್ರದುರ್ಗ**

ತಾಲ್ಲೂಕಿನ ಸಿದ್ದಾಪುರ ಗ್ರಾಮದಲ್ಲಿ ಶ್ರೀ ಭದ್ರಕಾಳಮ್ಮ ಸಮೇತ ಶ್ರೀ ವೀರಭದ್ರಸ್ವಾಮಿ ದೇವಸ್ಥಾನದ ನೂತನ ಉತ್ಸವ ಮೂರ್ತಿ ಪ್ರತಿಷ್ಠಾಪನೆ ಲೋಕಾರ್ಪಣೆ ಸಮಾರಂಭವೂ ಮೇ. 13 ಮತ್ತು 14 ರಂದು ಹಮ್ಮಿಕೊಳ್ಳಲಾಗಿದೆ ಎಂದು ಶ್ರೀ ವೀರಭದ್ರೇಶ್ವರ ಭಕ್ತ ಮಂಡಳಿ ತಿಳಿಸಿದೆ. ಲೋಕ ಕಲ್ಯಾಣಾರ್ಥವಾಗಿ ಮೇ. 13ನೇ ಮಂಗಳವಾರ ಸಂಜೆ 7.00 ರಿಂದ ಗೋದೂಳಿ ಲಗ್ನದಲ್ಲಿ ಗಂಗಾ ಪೂಜೆ, ಗೋ ಪೂಜೆ, ದೀಪ ಪೂಜೆ, ಗಣಪತಿ ಸ್ವಸ್ತಿ ಪುಣ್ಯಾಹ ವಾಚನ ಹಾಗೂ ವಿಗ್ರಹ ಸಂಸ್ಕಾರ ಪೂಜಾ ಕಾರ್ಯಕ್ರಮ ನಡೆಯಲಿದೆ. ಮೇ. 14ನೇ ಬುಧವಾರ ಬೆಳಿಗ್ಗೆ 6.00 ರಿಂದ ಬ್ರಾಹ್ಮಿ ಮುಹೂರ್ತದಲ್ಲಿ ಕಲಶ ಸ್ಥಾಪನೆ, ಉತ್ಸವಮೂರ್ತಿಗೆ ಪ್ರಾಣ ಪತ್ರಿಷ್ಠೆ, ರುದ್ರಾಭಿಷೇಕ, ಗಣ ಹೋಮ ಪೂರ್ಣಾಹುತಿ ನಂತರ ಮಹಾಮಂಗಳಾರತಿ ಪ್ರಸಾದ ವಿನಿಯೋಗ ಕಾರ್ಯಕ್ರಮ ನಡೆಯಲಿದೆ. ಬೆಳಿಗೆ 11.00 ರಿಂದ ವೇದಿಕೆ ಕಾರ್ಯಕ್ರಮ ನಡೆಯಲಿದ್ದು. ದಿವ್ಯ ಸಾನಿಧ್ಯವನ್ನು ಎಡೆಯೂರು ಕ್ಷೇತ್ರದ ಬಾಳೆಹೊನ್ನೂರು ಮಠದ ಶಿಲಾಮಠ ತಾವರೆಕೆರೆ, ಹಾಗೂ ಅಖಿಲ ಭಾರತ ವೀರಶೈವ ಶಿವಾಚಾರ್ಯ ಸಂಸ್ಥೆ(ರಿ)ಯ ಗೌರವಾಧ್ಯಕ್ಷರಾದ ಶ್ರೀ ರೇಣುಕ ಶಿವಾಚಾರ್ಯ ಮಹಾಸ್ವಾಮಿಗಳು ವಹಿಸಲಿದ್ದಾರೆ. ಎಲ್ಲಾ ಧಾರ್ಮಿಕ ಕಾರ್ಯಕ್ರಮಗಳಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕಾಗಿ ಸಿದ್ದಾಪುರ ಗ್ರಾಮಸ್ಥರು ಹಾಗೂ ಸಮಸ್ತ ಭಕ್ತಾದಿಗಳ ಮನವಿ ಮಾಡಿದ್ದಾರೆ.

### ಪಹಲ್ಗಾಮ್ ಘಟನೆ ದೇಶದ ಸಂಸ್ಕೃತಿ ಮೇಲಿನ ದಾಳಿ: ಬಿಜೆಪಿ ವಕ್ತಾರ ನಾಗರಾಜ್ ಬೇದ್ರೇ


» **ಚಿತ್ರದುರ್ಗ**

ಪಹಲ್ಗಾಮ್‌ನಲ್ಲಿ 26 ಅಮಾಯಕ ಜನರನ್ನು ಭಯೋತ್ಪಾದಕರು ಹತ್ಯೆ ಮಾಡಿದ್ದಲ್ಲದೆ ಈ ದೇಶದ ಸಂಸ್ಕೃತಿ ಮೇಲೆ ಮಾಡಿದ ದಾಳಿಯಾಗಿದೆ ಜಾತಿ ಧರ್ಮದ ಹೆಸರಿನಲ್ಲಿ ಬೇರೆಯವರಿಗೆ ಮಾಡುತ್ತಿರುವುದು ನಮ್ಮ ದೇಶದ ಸಂಸ್ಕೃತಿ ಅಲ್ಲ. ಈ ದೇಶದಲ್ಲಿ ಪ್ರಾಚೀನ ಕಾಲದಿಂದಲೂ ಎಲ್ಲ ಧರ್ಮದವರಿಗೆ ಸಮಾನ ಅವಕಾಶ ಇದೆ ಎಂದು ಭಾರತೀಯ ಜನತಾ ಪಾರ್ಟಿಯ ಜಿಲ್ಲಾ ವಕ್ತಾರರಾದ ನಾಗರಾಜ್ ಬೇದ್ರೇ ತಿಳಿಸಿದ್ದಾರೆ. ಈ ಬಗ್ಗೆ ಹೇಳಿಕೆಯನ್ನು ನೀಡಿರುವ ಅವರು ಭಾರತ ದೇಶದಲ್ಲಿ ಎಲ್ಲರೂ ಏಕತೆ ಭಾವೈಕ್ಯತೆಯಿಂದ ಬದುಕುತ್ತಿರುವ ಜನ ನಮ್ಮವರು ಈ ನಾಡಿನಲ್ಲಿ ಶರಣರು, ಸೂಫಿ ಸಂತರು, ಸಂತರು, ಆಗಿ ಹೋಗಿದ್ದಾರೆ. ಇವತ್ತಿಗೂ ಅವರು ಹಾಕಿ ಕೊಟ್ಟ ಮಾರ್ಗದರ್ಶನದಲ್ಲಿ ಅವರು ಬಿಟ್ಟು ಹೋದ ಸಂದೇಶದಲ್ಲಿ ನಡೆದು ಕೊಳ್ಳುತ್ತಿರುವ ನಾವು ಎಲ್ಲರೂ ಇಂಥ ದೇಶದಲ್ಲಿ ಭಯೋತ್ಪಾದಕರು ಧರ್ಮದ ಹೆಸರಿನಲ್ಲಿ ದಾಳಿ ಮಾಡಿರುವುದು ಅಕ್ಷಮ್ಯ ಅಪರಾಧ. ಅದನ್ನು ನಾನು ಬಲವಾಗಿ ಖಂಡಿಸುತ್ತೇನೆ ಎಂದಿದ್ದಾರೆ.

### ಪಗಡಲಬಂಡೆ ಗ್ರಾಪಂ ಅಧ್ಯಕ್ಷ ತಿಮ್ಮರಾಯಪ್ಪ ಹೃದಯಾಘಾತದಿಂದ ನಿಧನ

» **ಪರಶುರಾಂಪುರ**

ಹೋಬಳಿ ವ್ಯಾಪ್ತಿಯ ಪಗಡಲಬಂಡೆ ಗ್ರಾಮದ



ಗ್ರಾ.ಪಂ ಅಧ್ಯಕ್ಷ ತಿಮ್ಮರಾಯಪ್ಪ (75) ಹೃದಯಾಘಾತದಿಂದ ಶನಿವಾರ ನಿಧನರಾದರು. ಇವರು ನಿವೃತ್ತ ಮುಖ್ಯ ಶಿಕ್ಷಕರು ಮತ್ತು ಸರ್ವೋದಯ ಎಜುಕೇಷನ್ ಟ್ರಸ್ಟ್ ಆಡಳಿತಾಧಿಕಾರಿಯಾಗಿದ್ದರು. ಇವರಿಗೆ ಇಬ್ಬರು ಪುತ್ರಿಯರು ಮತ್ತು ಒಬ್ಬ ಪುತ್ರ ಇದ್ದಾರೆ. ಇವರ ಅಂತ್ಯಕ್ರಿಯೆಯನ್ನ ಸ್ವಗ್ರಾಮದಲ್ಲಿ ನೆರವೇರಿಸಲಾಯಿತು. ಇವರು ಅಪಾರ ಶಿಷ್ಯ ವೃಂದ ಜತೆ ಬಂದು ಬಳಗವನ್ನು ಬಿಟ್ಟು ಅಗಲಿದ್ದಾರೆ.

### ಉಚಿತ ತರಬೇತಿ ಕಾರ್ಯಗಾರ

» **ಚಳ್ಳಕೆರೆ**

ಕರ್ನಾಟಕ ಆರ್ಯವೈಶ್ಯ ಮಂಡಳಿ ಲೋಕಸೇವಾ



ಆಯೋಗನಡೆಸುವಐಎಎಸ್, ಐಪಿಎಸ್ ಪರೀಕ್ಷೆಗಳನ್ನು ಎದುರಿಸಲು ವಿಶೇಷ ತರಬೇತಿ ಕಾರ್ಯಗಾರವನ್ನು ಉಚಿತವಾಗಿ ಆಯೋಜಿಸಿದ್ದು ಬಡ ಮತ್ತು ಮಧ್ಯಮ ವರ್ಗದ ಜನರು ಇದರ ಸದುಪಯೋಗವನ್ನು ಪಡೆದುಕೊಳ್ಳುವಂತೆ ಕರ್ನಾಟಕ ಆರ್ಯವೈಶ್ಯ ಮಂಡಳಿ ಕಾರ್ಯಗಾರಿ ಸಮಿತಿ ಸದಸ್ಯ, ಜಿಲ್ಲಾ ಆರ್ಯವೈಶ್ಯ ಸಮುದಾಯದ ಮುಖಂಡ ಸಿ.ಎಸ್.ಪ್ರಸಾಧ್ ಮನವಿ ಮಾಡಿದ್ದಾರೆ. ಮುಂಬರುವ 2026ರಲ್ಲಿ ಕರ್ನಾಟಕ ಲೋಕಸೇವಾ ಆಯೋಗ ಐಎಎಸ್, ಐಪಿಎಸ್ ಪರೀಕ್ಷೆನಡೆಸಲಿದ್ದು, ಆರ್ಯವೈಶ್ಯಮಂಡಳಿ ಹಾಗೂ ವಾಸವಿ ಅಕಾಡೆಮ ಉಚಿತ ತರಬೇತಿ ಕಾರ್ಯಗಾರವನ್ನು ಬೆಂಗಳೂರಿನ ವಿಜಯನಗರದ ಚಂದ್ರಾ ಲೇಔಟ್ನ ವಾಸವಿ ಅಕಾಡೆಮಿಯಲ್ಲಿ ಹಮ್ಮಿಕೊಳ್ಳಲಿದೆ. ಹೆಚ್ಚಿನ ಮಾಹಿತಿಗೆ 94480 74528, 96639 00439, ಸಿ.ಎಸ್.ಪ್ರಸಾದ್ 98452 83028 ಸಂಪರ್ಕಿಸಲು ಮನವಿ ಮಾಡಲಾಗಿದೆ.

**ಫಾಸ್ಟ್ ನ್ಯೂಸ್**

## ಓಬಳಾನರಸಿಂಹಸ್ವಾಮಿ ದೇವಸ್ಥಾನಕ್ಕೆ ನೆರವು



» **ಚಳ್ಳಕೆರೆ**

ಕಳೆದ ಹಲವಾರು ದಶಕಗಳಿಂದ ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆವತಿಯಿಂದ ಗ್ರಾಮದ ಪುರಾತನ ದೇವಸ್ಥಾನಗಳ ಜೀರ್ಣೋದ್ದಾರಕ್ಕೆ ಆರ್ಥಿಕ ನೆರವು ನೀಡುತ್ತಿದ್ದು ಇದರಿಂದ ಪುರಾತನ ದೇವಸ್ಥಾನಗಳ ಪುನರ್ ನಿರ್ಮಾಣದಜೊತೆಯಲ್ಲಿ ಗ್ರಾಮದ ಭಕ್ತರ ಕೋರಿಕೆಯನ್ನು ಸಹ ಈಡೇರಿಸಲಾಗುತ್ತಿದೆ. ಇಂದು ನಾವೆಲ್ಲರೂ ಉತ್ತಮ ಜೀವನನಡೆಸುತ್ತಿದ್ದರೆ ಅದಕ್ಕೆನಾವು ದೇವರ ಮೇಲಿಟ್ಟ ಭಕ್ತ, ಶ್ರದ್ದೆಯೇ ಕಾರಣವೆಂದು ಜಿಲ್ಲಾ ನಿರ್ದೇಶಕ ಪ್ರವೀಣ್ಕುಮಾರ್ ತಿಳಿಸಿದರು. ಅವರು, ಶನಿವಾರ ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ದಿಯೋಜನೆಯ ದೊಡ್ಡ ಉಳ್ಳಾರ್ತಿವಲಯದ ಚಿತ್ರನಾಯಕನಹಳ್ಳಿ ಗ್ರಾಮದ ಓಬಳಾನರಸಿಂಹಸ್ವಾಮಿ ದೇವಸ್ಥಾನಕ್ಕೆ 1.50ಲಕ್ಷ ಮೌಲ್ಯದ ಡಿಡಿಯನ್ನು ವಿತರಿಸಿ ಮಾತನಾಡಿದರು. ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ದಿಯೋಜನೆಯಿಂದ ಹಲವಾರು ಪುರಾತನ ದೇವಸ್ಥಾನಗಳ ಅಭಿವೃದ್ದಿಗೆ ಆರ್ಥಿಕ ನೆರವು ನೀಡುವ ಮೂಲಕ ಪುನಶ್ಚೇತನ ಕಾರ್ಯ ಮಾಡುತ್ತಿದೆ. ಇದಕ್ಕೆ ಸಂಪೂರ್ಣ ಸಹಕಾರ ನೀಡುತ್ತಿರುವ ವೀರೇಂದ್ರ ಹೆಗ್ಗಡೆಯವರಿಗೆ ನಾವು ಕೃತಜ್ಞತೆಸಲ್ಲಿಸುವುದಾಗಿತಿಳಿಸಿದರು.ಕಾರ್ಯಕ್ರಮದ ಅಧ್ಯಕ್ಷ ವಹಿಸಿದ್ದ ಗ್ರಾಮದ ಮುಖಂಡ ಈರಣ್ಣ, ಗ್ರಾಮೀಣ ಭಾಗಗಳ ದೇವಸ್ಥಾನದ ಅಭಿವೃದ್ದಿಯ ಬಗ್ಗೆ ಭಕ್ತರು ಹಾಗೂ ಸರ್ಕಾರ ಪ್ರಯತ್ನಪಟ್ಟರೆ ಸಾಲದು ಶ್ರೀಕ್ಷೇತ್ರಧರ್ಮಸ್ಥಳ ಗ್ರಾಮಾಭಿವೃದ್ದಿ ಯೋಜನೆಯ ರುವಾರಿಗಳು ಶ್ರೇಷ್ಠದಾರ್ಶನಿಕರಾದ ವೀರೇಂದ್ರ ಹೆಗ್ಗಡೆಯವರು ಇಂತಹ ಕಾರ್ಯಕ್ಕೆ ಆರ್ಥಿಕ ನೆರವು ಒದಗಿಸುವ ಮೂಲಕ ಜನರಲ್ಲಿನ ಧಾರ್ಮಿಕ ಭಾವನೆಗಳಿಗೆ ಸ್ಪಂದಿಸಿದ್ದಾರೆಂದರು. ಕಾರ್ಯಕ್ರಮದಲ್ಲಿ ಯೋಜನಾಧಿಕಾರಿ ಜಯಂತ್, ಗ್ರಾಮದ ಮುಖಂಡರಾದ ನಾರಾಯಣರೆಡ್ಡಿ, ಗುರುಮೂರ್ತಿ, ನಾಗೇಂದ್ರಪ್ಪ, ಪಾಲಣ್ಣ, ಗ್ರಾಪಂ ಸದಸ್ಯೆ ಕರಿಯಮ್ಮ, ವಲಯ ಮೇಲ್ವಿಚಾರಕಿ ಗಿರಿಜಾ, ಸೇವಾಪ್ರತಿನಿಧಿ ಮಂಜುಳಾ, ಒಕ್ಕೂಟದ ಅಧ್ಯಕ್ಷೆ ಸುನಿತಾ ಮುಂತಾದವರು ಪಾಲ್ಗೊಂಡಿದ್ದರು.

## ಶಾಸಕ ಚಂದ್ರಪ್ಪ ಹುಟ್ಟು ಹಬ್ಬದ ಪ್ರಯುಕ್ತ ದೇವಸ್ಥಾನದಲ್ಲಿ ಪೂಜೆ



» **ಚಿತ್ರದುರ್ಗ**

ಹೊಳಲ್ಕೆರೆ ಶಾಸಕ ಡಾ.ಎಂ.ಚಂದ್ರಪ್ಪನವರು ತಮ್ಮ 68 ನೇ ಹುಟ್ಟುಹಬ್ಬದ ಅಂಗವಾಗಿ ನಗರದ ವಿವಿಧ ದೇವಾಲಯಗಳಿಗೆ ತೆರಳಿ ಶನಿವಾರ ಪೂಜೆ ಸಲ್ಲಿಸಿದರು. ಆನೆಬಾಗಿಲು ಸಮೀಪವಿರುವ ವೆಂಕಟೇಶ್ವರಸ್ವಾಮಿ, ಆಂಜನೇಯಸ್ವಾಮಿ, ಗಣೇಶ ದೇವಸ್ಥಾನ, ರಾಘವೇಂದ್ರ ಮಠ ಹಾಗೂ ನೀಲಕಂಠೇಶ್ವರಸ್ವಾಮಿ ದೇವಸ್ಥಾನದಲ್ಲಿ ಪೂಜೆ ಸಮರ್ಪಿಸಿದರು. ನೀಲಕಂಠೇಶ್ವರಸ್ವಾಮಿ ದೇವಸ್ಥಾನದಲ್ಲಿ ಶಾಸಕ ಡಾ.ಎಂ.ಚಂದ್ರಪ್ಪನವರ ಹೆಸರಿನಲ್ಲಿ ಅರ್ಚನೆ ಮಾಡಲಾಯಿತು. ಚಿಕ್ಕಜಾಜೂರು ಗಂಗಣ್ಣ, ಡಿ.ಸಿ.ಮೋಹನ್, ನಾಗರಾಜ್‌ಬೇದ್ರೆ, ಎಂ.ಚಂದ್ರಪ್ಪನವರ ಪುತ್ರಿ ಯಶಸ್ವಿನಿ ಇವರುಗಳು ಈ ಸಂದರ್ಭದಲ್ಲಿದ್ದರು.

## ಹೊಟ್ಟೆನೋವು ತಾಳದೆ ಯುವಕ ನೇಣಿಗೆ ಶರಣು

» **ಚಳ್ಳಕೆರೆ**

ತಾಲ್ಲೂಕಿನ ಗೊರ್ಲಕಟ್ಟೆ ಗ್ರಾಮದ ಗೌರೇಶ್(23) ಎಂಬಯುವಕ ಕಳೆದ ಹಲವಾರು ವರ್ಷಗಳಿಂದ ಹೊಟ್ಟೆನೋವಿನಿಂದ ನರಳುತ್ತಿದ್ದು, ಹೊಟ್ಟೆನೋವು ತಾಳದೆ ಮೇ.10ರ ಶನಿವಾರ ರಾತ್ರಿ 10ರಸಮಯದಲ್ಲಿ ಗ್ರಾಮದ ಜಮೀನಿನ ಮರಕ್ಕೆ ನೇಣುಹಾಕಿಕೊಂಡು ಮೃತಪಟ್ಟಿರುತ್ತಾನೆ. ಮೃತ ತಂದೆ ಜಯಣ್ಣ ಈ ಬಗ್ಗೆ ಪೊಲೀಸರಿಗೆ ದೂರು ನೀಡಿ, ಹೊಟ್ಟೆನೋವು ತಾಳದೆ ಮಗ ಆತ್ಮಹತ್ಯೆ ಮಾಡಿಕೊಂಡಿದ್ದು ಸಾವಿನಲ್ಲಿ ಯಾವುದೇ ಅನುಮಾನವಿಲ್ಲವೆಂದು ದೂರು ನೀಡಿದ್ದಾನೆ. ಪಿಎಸ್‌ಐ ಧರೆಪ್ಪಬಾಳಪ್ಪದೊಡ್ಡಮನಿ ಪ್ರಕರಣ ದಾಖಲಿಸಿದ್ದಾರೆ.

## ಹಾವು ಕಡಿದು ವ್ಯಕ್ತಿ ಸಾವು

» **ಹೊಸದುರ್ಗ**

ತನ್ನ ಜಮೀನಿನಲ್ಲಿ ಕೆಲಸ ಮಾಡುತ್ತಿದ್ದ ಸಂಧರ್ಬದಲ್ಲಿ ವಿಷ ಪೂರಿತ ಹಾವೊಂದು ಕಡಿದ ಪರಿಣಾಮ ಸ್ಥಳದಲ್ಲೆ ಸಾವನ್ನಪ್ಪಿರುವ ಘಟನೆ ತಾಲೂಕಿನ ಮಾಡದಕೆರೆ ಹೋಬಳಿ ಭಂಟನಗವಿ ಗ್ರಾಮದ ಹೊರವಲಯದ ಜಮೀನೊಂದರಲ್ಲಿ ಸಂಭವಿಸಿದೆ. ಮೃತನನ್ನು ಭಂಟನಗವಿ ಗ್ರಾಮದ ರಂಗಪ್ಪ ಎಂಬುವವರ ಪುತ್ರ ಚಿತ್ತಪ್ಪ (67) ಎಂದು ತಿಳಿದು ಬಂದಿದ್ದು ಈತ ಶನಿವಾರ ತನ್ನ ಜಮೀನಿನಲ್ಲಿ ಕೆಲಸ ಮಾಡುತ್ತಿದ್ದ ಸಂಧರ್ಬದಲ್ಲಿ ಈ ಘಟನೆ ನಡೆದಿದ್ದು ಈ ಬಗ್ಗೆ ಹೊಸದುರ್ಗ ಪೋಲಿಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

**ಸಮೀಕ್ಷೆದಾರರಿಗೆ ಅಗತ್ಯ ತರಬೇತಿ ನೀಡಿ– ನ್ಯಾ.ನಾಗಮೋಹನ್ ದಾಸ್ ಭೇಟಿ ಮಾಡಿದ ಎಡ–ಬಲ ಮುಖಂಡರ ನಿಯೋಗ**

# ಜಾತಿಗಣತಿ ಲೋಪ ಸರಿಪಡಿಸಿ

» **ಚಿತ್ರದುರ್ಗ**

ದತ್ತಾಂಶ ಸಂಗ್ರಹದ ಮೂಲಕ ಪರಿಶಿಷ್ಟ ಜಾತಿಯಲ್ಲಿನ 101 ಜಾತಿಗೂ ನ್ಯಾಯ ಕಲ್ಪಿಸಲು ಮುಂದಾಗಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ದಿಟ್ಟ ಹೆಜ್ಜೆ ಇಟ್ಟಿರುವುದು ಸ್ವಾಗತಾರ್ಹ. ಆದರೆ, ಜಾತಿಗಣತಿ ಕಾರ್ಯದ ವೇಳೆ ಬಹಳಷ್ಟು ಸಮಸ್ಯೆಗಳು ಎದುರಾಗಿದ್ದು, ಇವುಗಳನ್ನು ತಕ್ಷಣ ಬಗೆಹರಿಸುವಂತೆ ಎಡ–ಬಲ ಮುಖಂಡರ ನಿಯೋಗ ಒತ್ತಾಯಿಸಿದೆ.

ನ್ಯಾ.ನಾಗಮೋಹನ್ ದಾಸ್ ಅವರನ್ನು ಬೆಂಗಳೂರಿನ ಅವರ ಕಚೇರಿಯಲ್ಲಿ ಶುಕ್ರವಾರ ಸಂಜೆ ಭೇಟಿ ಮಾಡಿದ ಮಾದಿಗ–ಛಲವಾದಿ ಮುಖಂಡರ ನಿಯೋಗ, ಜಾತಿಸಮೀಕ್ಷೆ ವೇಳೆ ಎದುರಾಗಿರುವ ಸಮಸ್ಯೆಗಳನ್ನು ಎಳೆಎಳೆಯಾಗಿ ಬಿಚ್ಚಿಟ್ಟು ತಕ್ಷಣ ಪರಿಹರಿಸುವಂತೆ ಕೋರಿದರು.

ಒಳಮೀಸಲಾತಿ ಶೀಘ್ರ ಜಾರಿಗೊಳಿಸಬೇಕೆಂಬ ಸರ್ಕಾರದ ಕಾಳಜಿ, ಬದ್ಧತೆ ಸರಿಯಿದೆ. ಆದರೆ, ಜಾತಿಸಮೀಕ್ಷೆ ಕಾರ್ಯಕ್ಕೆ ಗಣತಿದಾರರಿಗೆ ಕೇವಲ 3 ಗಂಟೆ ತರಬೇತಿ ನೀಡಿರುವುದು ಬಹಳಷ್ಟು ಲೋಪಗಳಿಗೆ ಕಾರಣವಾಗಿದೆ. ಆದ್ದರಿಂದ ಅವರಿಗೆ ಒಂದು ದಿನದ ಮಟ್ಟಿಗೆ ಸಮಗ್ರ ಮಾಹಿತಿ ನೀಡುವ ತರಬೇತಿ ಆಯೋಜಿಸಬೇಕು.

ನೆ□□ವರ್ಕ್,ಸರ್ವರ್‌ಸಮಸ್ಯೆಪರಿಹರಿಸಲು ಹೋಬಳಿಗೊಬ್ಬರಂತೆ ಟೆಕ್ನಿಷನ್ ನೇಮಿಸಬೇಕು. ಪರಿಶಿಷ್ಟ ಸಮುದಾಯ ಶೈಕ್ಷಣಿಕವಾಗಿ ಹಿಂದುಳಿದಿರುವ ಕಾರಣ, ಜಾತಿಗಣತಿಯಲ್ಲಿನ ಪ್ರಶ್ನಾವಳಿಗಳಿಗೆ ಮಾಹಿತಿ ನೀಡಲು ತಡವರಿಸುತ್ತಿದ್ದಾರೆ. ಆದ್ದರಿಂದ ಪ್ರಶ್ನೆಗಳನ್ನು ಸರಳಗೊಳಿಸಬೇಕು.

ರೇಷನ್ ಕಾ□□□□ನಲ್ಲಿ ಸೊಸೆ ಹಾಗೂ ಚಿಕ್ಕ ಮಕ್ಕಳ ಹೆಸರು ಇಲ್ಲವೆಂದು ನೋಂದಣಿ ಮಾಡಿಕೊಳ್ಳುತ್ತಿಲ್ಲ. ಇದು ತಪ್ಪು ನಡೆ ಆಗಿದ್ದು, ಹೊಸದಾಗಿ ಮದುವೆ ಆಗಿಬಂದ ಸೊಸೆ, ಆಗತಾನೇ ಹುಟ್ಟಿದ ಮಕ್ಕಳ ಮಾಹಿತಿ ದಾಖಲಿಸಿಕೊಳ್ಳಲು ಯಾವುದೇ ದಾಖಲೆ ಕೇಳಬಾರದು. ಈ ನಿಟ್ಟಿನಲ್ಲಿ ಆದೇಶಿಸಬೇಕು.

ಬಹಳಷ್ಟುಗಣತಿದಾರರಬಳಿಗುಣಮಟ್ಟದ ಮೊಬೈ□□ಗಳು ಇಲ್ಲದ ಕಾರಣ ಜಾತಿಗಣತಿ □□□ಪ್ ಡೌ□□ಲೋಡ್ ಮಾಡಿಕೊಂಡು ಸಮೀಕ್ಷೆ ಕಾರ್ಯ ಕೈಗೊಳ್ಳಲು ಸಮಸ್ಯೆ ಆಗುತ್ತಿದೆ. ಇದನ್ನು ಸರಿಪಡಿಸಲು ತಕ್ಷಣ ಕ್ರಮಕೈಗೊಳ್ಳಬೇಕು.

ಜಾತಿಗಣತಿ ಕಾರ್ಯ ಪಾರದರ್ಶಕ, ನ್ಯಾಯಸಮ್ಮತವಾಗಿರಬೇಕು. ಅದರೆ, ಕೆಲವೆಡೆ ಗೊತ್ತಿದ್ದು ತಪ್ಪು ಮಾಹಿತಿ ನೋಂದಾಯಿಸಿಕೊಳ್ಳಲಾಗುತ್ತಿದೆ ಎಂಬ ಆರೋಪ ಕೇಳಿಬರುತ್ತಿದೆ. ಆದ್ದರಿಂದ ತಪ್ಪು ಮಾಹಿತಿ ನೋಂದಾಯಿಸಿಕೊಳ್ಳುವ ಗಣತಿದಾರರ ವಿರುದ್ಧ ಕಾನೂನು ಕ್ರಮಕೈಗೊಳ್ಳಲಾಗುವುದು ಎಂಬ ಎಚ್ಚರಿಕೆ ಸಂದೇಶ ರವಾನಿಸಬೇಕು.

ಪರಿಶಿಷ್ಟಜಾತಿಯಲ್ಲಿರುವಬೇಡಜಂಗಮ, ಬುಡ್ಗಜಂಗಮ ಹೆಸರಿನಲ್ಲಿ ಲಿಂಗಾಯಿತ ಸಮಾಜದ ಗುರುಸ್ಥಾನದಲ್ಲಿರುವ ವೀರಶೈವರು, ನಾವು ಬೇಡಜಂಗಮರೆಂದು ನೋಂದಾಯಿಸಿಕೊಳ್ಳುತ್ತಿದ್ದಾರೆ. ಇದಕ್ಕೆ ಸಂಪೂರ್ಣ ಕಡಿವಾಣ ಹಾಕಬೇಕು. ಸುಳ್ಳು ಹೇಳಿ ನೋಂದಾಯಿಸಿಕೊಂಡವರ ವಿರುದ್ಧ ಕಾನೂನು ಕ್ರಮಕೈಗೊಳ್ಳಬೇಕೆಂದು ನಿಯೋಗ ಮನವಿ ಮಾಡಿತು.

ಗಣತಿ ಕಾರ್ಯದಲ್ಲಿ ಶಿಕ್ಷಕರು ಹಾಗೂ ಇತರೆ ಎಲ್ಲ ಸಿಬ್ಬಂದಿಗೆ ಅಗತ್ಯ ಪರಿಕರಗಳನ್ನು ನೀಡಬೇಕು. ಬಿಸಿಲು ಹೆಚ್ಚಿರುವ ಕಾರಣಕ್ಕೆ ಅವರಿಗೆ ಟೋಪಿ ಸೇರಿ ಎಲ್ಲ ಅಗತ್ಯ ಸಾಮಾಗ್ರಿಗಳನ್ನು ತುರ್ತಾಗಿ ಒದಗಿಸಬೇಕು. ಜೊತೆಗೆ ಅವರಿಗೆ ಈ ಕಾರ್ಯ ಕೈಗೊಂಡ ಕಾರಣಕ್ಕೆ ನೀಡುವ ಗೌರವಧನವನ್ನು ವಿಳಂಬ ಮಾಡದೆ ಬಿಡುಗಡೆಗೊಳಿಸಬೇಕು.

ಹೀಗೆ ಅನೇಕ ವಿಷಯಗಳ ಕುರಿತು ನ್ಯಾ.ನಾಗಮೋಹನ್ ದಾಸ್ ಜೊತೆಗೆ ಚರ್ಚಿಸಿದ ಎಡ–ಬಲ ಮುಖಂಡರ ನಿಯೋಗ, ಜಾತಿಗಣತಿ ಕಾರ್ಯ ಪಾರದರ್ಶಕವಾಗಿ ನಡೆಬೇಕು. ಮುಖ್ಯವಾಗಿ ಈಗ ಎದುರಾಗಿರುವ ಸಮಸ್ಯೆಗಳನ್ನು ತಕ್ಷಣ ಪರಿಹರಿಸಬೇಕು. ಸಮೀಕ್ಷೆ ಕಾರ್ಯದಲ್ಲಿ ಪಾಲ್ಗೊಂಡಿರುವ ಅನೇಕರು ಈಗಾಗಲೇ ಮೇಲಾಧಿಕಾರಿಗಳಿಗೆ ಈ ಸಂಬಂಧ ದೂರವಾಣಿ ಮೂಲಕ ಮಾಹಿತಿ ನೀಡಿದ್ದಾರೆ. ಆದ್ದರಿಂದ ಸಮಸ್ಯೆಗಳನ್ನು ಗುರುತಿಸಿ ಪರಿಹರಿಸುವುದು ಸುಲಭ. ಆದರೆ, ಈ ವಿಷಯದಲ್ಲಿ ವಿಳಂಬ ಆಗಬಾರದು ಎಂದು ತಿಳಿಸಿದರು.

ನಿಯೋಗದಲ್ಲಿದ್ದ ಎಡ–ಬಲ ಮುಖಂಡರ ಮಾತುಗಳನ್ನು ಆಲಿಸಿದ ನ್ಯಾ.ನಾಗಮೋಹನ್ ದಾಸ್ ಅವರು, ನಿಮ್ಮ ಹಾಗೂ ಈಗಾಗಲೇ ನಮಗೆ ತಲುಪಿರುವ ದೂರುಗಳು, ಸಂಶಯಗಳ ಕುರಿತು ಅವಲೋಕಿಸಿ ಎಲ್ಲ ಸಮಸ್ಯೆಗಳನ್ನು ಬಗೆಹರಿಸಲು ಪ್ರಾಮಾಣಿಕ ಪ್ರಯತ್ನ ಮಾಡಲಾಗುವುದು ಎಂದು ಭರವಸೆ ನೀಡಿದರು.

ಮಾಜಿ ಸಚಿವ ಹೆಚ್.ಆಂಜನೇಯ, ರಾಜ್ಯಸಭೆ ಮಾಜಿ ಸದಸ್ಯ ಎಲ್. ಹನುಮಂತಯ್ಯ, ದಸಂಸ ರಾಜ್ಯ ಸಂಚಾಲಕ ಡಿ.ಜಿ.ಸಾಗರ್, ಕೆಪಿಎ□□ಸಿ ಮಾಜಿ ಸದಸ್ಯ ದಾಸಯ್ಯ, ಮುತ್ತುರಾಜ್, ಅಮರನಾಥ ಮಳವಳ್ಳಿ ಇತರರು ನಿಯೋಗದಲ್ಲಿದರು.



> ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಒಳಮೀಸಲಾತಿ ಜಾರಿಗೊಳಿಸಲು ಉತ್ಸಾಹಕರಾಗಿದ್ದಾರೆ. ಜೊತೆಗೆ ಪರಿಶಿಷ್ಟ ಸಮುದಾಯದಲ್ಲಿನ ಯಾವುದೇ ಜಾತಿಗೂ ಅನ್ಯಾಯ ಆಗದ ರೀತಿ ಮೀಸಲಾತಿ ಹಂಚಿಕೆ ಮಾಡಬೇಕೆಂಬ ಕಾಳಜಿ ಹೊಂದಿದ್ದಾರೆ. ಅವರ ಸೂಚನೆ ಮೇರೆಗೆ ನಡೆಯುತ್ತಿರುವ ಜಾತಿಗಣತಿ ಪಾರದರ್ಶಕವಾಗಿರಬೇಕು. ಈ ನಿಟ್ಟಿನಲ್ಲಿ ಆಯೋಗದ ಜವಾಬ್ದಾರಿ ಹೆಚ್ಚು ಇದೆ.
>
> » **ಎಚ್. ಆಂಜನೇಯ. ಮಾಜಿ ಸಚಿವ**

## ದೇವರ ಮೇಲೆ ಇರುವ ಅಪಾರವಾದ ಭಕ್ತಿ, ಶ್ರದ್ದೆ ನಮ್ಮೆಲ್ಲರ ಬದುಕನ್ನು ಪಾವನಗೊಳಿಸಿದೆ: ಶಾಸಕ

» **ಚಳ್ಳಕೆರೆ**

ದೇವರ ಮೇಲೆ ಅಪಾರವಾದ ಭಕ್ತಿ ಮತ್ತು ಶ್ರದ್ದೆ ಇಂದಿಗೂ ನಮ್ಮಲ್ಲಿ ಜೀವಂತವಾಗಿದೆ. ಧಾರ್ಮಿಕ ಕಾರ್ಯಕ್ರಮಗಳನ್ನು ಪ್ರತಿವರ್ಷವೂ ತಪ್ಪದೆ ಮಾಡುವ ಮೂಲಕ ಭಗವಂತನ ಅನುಗ್ರಹ ಪಡೆಯಲು ನಾವೆಲ್ಲರೂ ಉತ್ಸವಗಳನ್ನು ಹಮ್ಮಿಕೊಳ್ಳುತ್ತೇವೆ. ಪ್ರತಿಯೊಬ್ಬರ ಬದುಕಿನಲ್ಲಿ ಸುಖ, ಶಾಂತಿ, ನೆಮ್ಮದಿ ಕರುಳಿಸಲು ಭಗವಂತನಿಂದ ಮಾತ್ರ ಸಾಧ್ಯವೆಂದು ಶಾಸಕ, ಸಣ್ಣಕೈಗಾರಿಕೆ ಅಭಿವೃದ್ದಿಮಂಡಳಿ ಅಧ್ಯಕ್ಷ ಟಿ.ರಘುಮೂರ್ತಿ ತಿಳಿಸಿದರು.

ಅವರು, ಭಾನುವಾರ ತಾಲ್ಲೂಕಿನ ದ್ ಒ ಡ್ಡ ಬೀ ರ ನ್ ಹ ಳ್ಳಿ ಗ್ರಾ ವ್ ು ದ ಜುಂಜಪ್ಪಸ್ವಾಮಿದೇವಸ್ಥಾನದ ಕಳಸ ಪ್ರತಿಷ್ಠಾಪನೆ ಹಾಗೂ ಕರೀಕೆರೆ ಗ್ರಾಮದ ಶ್ರೀಓ ಬಳನರಸಿಂಹಸ್ವಾಮಿದೇವಸ್ಥಾನದ ಉದ್ಘಾಟನೆ ಹಾಗೂ ಕಳಸರೋಹಣ ಕಾರ್ಯಕ್ರಮದಲ್ಲಿ ಪಾಲ್ಗೊಂಡು ನೆರೆದಿದ್ದ ಭಕ್ತರನ್ನು ಉದ್ದೇಶಿಸಿ ಮಾತನಾಡಿದರು.

ಚಳ್ಳಕೆರೆ ವಿಧಾನಸಭಾ ಕ್ಷೇತ್ರದ ಶಾಸಕನಾಗಿ ಮೂರನೇ ಬಾರಿಗೆ ನನಗೆ ಸೇವೆ ಮಾಡಲು ಅವಕಾಶ ಮಾಡಿಕೊಟ್ಟ ಜನತೆ ಮತ್ತು ದೇವರಿಗೆ ವಂದಿಸುತ್ತೇನೆ. ಕ್ಷೇತ್ರದ ಯಾವುದೇ ಬ , ಭಾಗದಲ್ಲಾದರೂ ಧಾರ್ಮಿಕ ಕಾರ್ಯಗಳು ನಡೆದರೂ ತಪ್ಪದೆ ಭಾಗವಹಿಸುತ್ತೇನೆ. ಎಲ್ಲರ ಕಷ್ಟಗಳನ್ನು ಪರಿಹರಿಸುವ ಶಕ್ತಿ ದೇವರಲ್ಲಿ ಮಾತ್ರ ಇದೆ ಎಂಬ ನಂಬಿಕೆ ಇಂದಿಗೂ ನಮ್ಮಲ್ಲಿ ಅಚಲವಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ರವಿಕುಮಾರ್, ಗ್ಯಾರಂಟಿ ಸಮಿತಿ ಸದಸ್ಯ ಅನಿಲ್‌ಕುಮಾರ್, ಜಿಪಂ ಕೆಡಿಪಿ ಸದಸ್ಯ ಓ.ರಂಗಸ್ವಾಮಿ, ಪರಶುರಾಮಪುರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಶಶಿಧರ, ಗ್ರಾಮಪಂಚಾಯಿತಿ ಉಪಾಧ್ಯಕ್ಷ ಪ್ರಸನ್ನಕುಮಾರ್, ಮುಖಂಡರಾದ ಈರಣ್ಣ, ಜಯಣ್ಣ, ಸುರೇಶ್, ಬೋಪಣ್ಣ, ನಾಗರಾಜು, ಗ್ರಾಮಪಂಚಾಯಿತಿ ಸದಸ್ಯ ಡಿ.ರಾಜಪ್ಪ, ಮಂಜುನಾಥ, ಭೀಮಾರೆಡ್ಡಿ, ಯಂಜಾರೆಡ್ಡಿ, ವೆಂಕಟೇಶ್, ಕೃಷ್ಣಪ್ಪ ಮುಂತಾದವರು ಪಾಲ್ಗೊಂಡಿದ್ದರು.



## ಸೈನಿಕರಿಗೆ ಆತ್ಮಸ್ಥೈರ್ಯ ತುಂಬಲು ಮಹಾ ಮೃತ್ಯುಂಜಯ ಹೋಮ



» **ಚಿತ್ರದುರ್ಗ**

ದೇಶದ ಹೆಮ್ಮೆಯ ವೀರ ಸೈನಿಕರಿಗೆ ಆತ್ಮಸ್ಥೈರ್ಯ ತುಂಬುವ ಹಾಗೂ ಅವರ ಜೀವ ರಕ್ಷಣೆಗಾಗಿ ನಗರದ ಮೆದೆ ಹಳ್ಳಿ ರಸ್ತೆಯಲ್ಲಿರುವ ಶ್ರೀ ಅಯ್ಯಪ್ಪ ಸ್ವಾಮಿ ದೇವಸ್ಥಾನದಲ್ಲಿ ಅಯ್ಯಪ್ಪ ಸ್ವಾಮಿ ದೇವರಿಗೆ ವಿಶೇಷವಾದ ಹೂವಿನ ಅಲಂಕಾರ ಹಾಗೂ ಮಹಾ ಮೃತ್ಯುಂಜಯ ಹೋಮವನ್ನು ನೆರವೇರಿಸಲಾಯಿತು. ಪಾಕಿಸ್ತಾನದ ಉಗ್ರರ ವಿರುದ್ಧ ಹೋರಾಡುತ್ತಿರುವ ಭೂ ಸೇನೆ ವಾಯು ಸೇನೆ ಹಾಗೂ ನೌಕಾ ಸೇನೆ ಸೈನಿಕರಿಗೆ ಆತ್ಮಸ್ಥೈರ್ಯ ತುಂಬಲು ಈ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು. ಪಹಲ್ಗಾವ್‌ನಲ್ಲಿ ಭಾರತೀಯರ ಮೇಲೆ ಭಯೋತ್ಪಾದಕರು ನಡೆಸಿದ ದಾಳಿಗೆ ಪ್ರತೀಕವಾಗಿ ಆಪರೇಷನ್ ಸಿಂಧೂರ ಯಶಸ್ವಿಗಾಗಿ ಪೂಜೆ ಹಮ್ಮಿಕೊಳ್ಳ ಲಾಯಿತು. ಜಾಗತಿಕ ಮಟ್ಟದಲ್ಲಿ ಉಗ್ರರ ಉತ್ಪಾದನಾ ಸ್ಥಾನವಾಗಿರುವ ಪಾಕಿಸ್ತಾನಕ್ಕೆ ಯುದ್ಧ ಮಾಡಲು ಸೈನಿಕರು ಮುಂದಾಗಿದ್ದಾರೆ ಭಾರತ ದೇಶಕ್ಕೂ ಹಾಗೂ ಸೈನಿಕರಿಗೂ ಯುದ್ಧದಲ್ಲಿ ಪಾಲ್ಗೊಳ್ಳುತ್ತಿರುವ ಅಧಿಕಾರಿಗಳು ಹಾಗೂ ಸಾರ್ವಜನಿಕರಿಗೂ ಯಾವುದೇ ರೀತಿಯ ಜೀವ ಹಾನಿಯಾಗದಿರಲಿ ಹಾಗೂ ಶತ್ರು ಸಂಹಾರವಾಗಲಿ. ಯುದ್ಧವು ಬೇಗನೆ ಯುದ್ಧ ಮುಗಿದು ದೇಶದಲ್ಲಿ ಶಾಂತಿ ನೆಲಸಲಿ ಶ್ರೀ ಅಯ್ಯಪ್ಪ ಸ್ವಾಮಿ ದೇವರಲ್ಲಿ ಪೂಜೆ ಹಾಗೂ ಸಂಕಲ್ಪ ಮಾಡಲಾಯಿತು .

## ಐಎಎಸ್, ಐಪಿಎಸ್ ಉಚಿತ ತರಬೇತಿ

**ಹೊಸದುರ್ಗ:** ಕರ್ನಾಟಕ ಆರ್ಯ ವೈಶ್ಯ ಮಹಾಸಭಾ ಸ್ಥಾಪಿಸಿರುವ ವಾಸವಿ ಅಕಾಡಮಿಯ ಮೂಲಕ ಐಎಎಸ್,ಐಪಿಎಸ್ ಮುಂತಾದ ಆಡಳಿತಾತ್ಮಕ ಪರೀಕ್ಷೆಗಳಿಗೆ ಉಚಿತ ಊಟ,ವಸತಿಯೊಂದಿಗೆ ತರಬೇತಿ ನೀಡಲು ಜಾತಿ ಧರ್ಮಗಳ ಬೇದವಿಲ್ಲದೆ ಅರ್ಜಿಗಳನ್ನು ಆಹ್ವಾನಿಸಲಾಗಿದೆ ಎಂದು ಕರ್ನಾಟಕ ಆರ್ಯವೈಶ್ಯ ಮಹಾಸಭೆಯ ನಿರ್ದೇಶಕರಾದ ಬಿ.ವಿ.ಲವಕುಮಾರ್ ತಿಳಿಸಿದ್ದಾರೆ. ಪರಿಣೀತರೂ ಆದ ಶಿಕ್ಷಕ ವೃಂದವನ್ನು ಅಕಾಡಮಿ ಹೊಂದಿದ್ದು ತರಬೇತಿಯು 6 ತಿಂಗಳ ಕಾಲಾವಧಿಯಾಗಿರುತ್ತದೆ ಎಂದು ಮಾಹಿತಿ ನೀಡಿರುವ ಅವರು ಹೆಚ್ಚಿನ ಮಾಹಿತಿಗೆ ಮೋ: 9448155132 ಸಂಪರ್ಕಿಸಬಹುದಾಗಿದೆ.

**ಪ್ರಮುಖ ಸುದ್ದಿ**

# ಸಾವಿರಾರು ಬಡ ವಿದ್ಯಾರ್ಥಿಗಳ ಶೈಕ್ಷಣಿಕ ಬದುಕಿಗೆ ಭದ್ರಬುನಾದಿ ಹಾಕಿದ ಕೀರ್ತಿ ಸಿರಿಯಣ್ಣನವರದ್ದು: ಶಾಸಕ ಟಿ.ರಘುಮೂರ್ತಿ

» **ಚಳ್ಳಕೆರೆ**

ನಾವು ಮಾಡುವ ಕೆಲಸ ನಮ್ಮನಂತರವೂ ಜನರ ಮನಸ್ಸಿನಲ್ಲಿ ಉಳಿಯುವಂತೆ ಇರಬೇಕು ಎಂದು ಕ್ಷೇತ್ರದ ಶಾಸಕ, ಸಣ್ಣಕೈಗಾರಿಕೆ ಅಭಿವೃದ್ದಿಮಂಡಳಿ ಅಧ್ಯಕ್ಷ ಟಿ.ರಘುಮೂರ್ತಿ ಹೇಳೀದರು.

ಅವರು, ನಗರದ ಯಾದವಹಾಸ್ಟಲ್‌ನಲ್ಲಿ ಭಾನುವಾರ ಹಮ್ಮಿಕೊಂಡಿದ್ದ ತಾಲ್ಲೂಕಿನ ಯಾದವ ಸಮುದಾಯದ ಹಿರಿಯ ಮುಖಂಡ, ನಿವೃತ್ತ ಪ್ರಾಂಶುಪಾಲ, ಗೋಕುಲಸಹಕಾರಿ ಬ್ಯಾಂಕ್ ಸಂಸ್ಥಾಪಕ ಅಧ್ಯಕ್ಷ, ಬಾಪೂಜಿವಿದ್ಯಾಸಂಸ್ಥೆಯನ್ನು ಕಟ್ಟಿಬೆಳೆಸುವಲ್ಲಿ ಪ್ರಧಾನಪಾತ್ರವಹಿಸಿದ್ದ ದಿವಂಗತ ಬಿ.ವಿ.ಸಿರಿಯಣ್ಣನವರ ನುಡಿನಮನ ಕಾರ್ಯಕ್ರಮವನ್ನು ಚಾಲನೆ ನೀಡಿ ಮಾತನಾಡಿದರು.

ನಿವೃತ್ತ ಪ್ರಾಂಶುಪಾಲ ದಿವಂಗತ ಬಿ.ವಿ.ಸಿರಿಯಣ್ಣ ತಮ್ಮ ಜೀವನ ಬಹುಪಾಲು ಸಮಯವನ್ನು ಬಡ ಮಕ್ಕಳಿಗೆ ವಿದ್ಯಾಭ್ಯಾಸ ನೀಡಲು ಶ್ರಮಿಸಿದವರು. ಗ್ರಾಮೀಣ ಭಾಗದ ಸಾವಿರಾರು ವಿದ್ಯಾರ್ಥಿಗಳಿಗೆ ಬಾಪೂಜಿವಿದ್ಯಾಸಂಸ್ಥೆಯಲ್ಲಿ ಅವಕಾಶ ಮಾಡಿಕೊಟ್ಟು ಅವರ ಶೈಕ್ಷಣಿಕ ಬದುಕಿಗೆ ಸ್ಪರ್ಶಕೊಟ್ಟಮಹಾನೀಯರು.ನಿವೃತ್ತಿನಂತರ ಭಾರತೀಯ ಜನತಾಪಕ್ಷ ಸೇರ್ಪಡೆಯಾಗಿ ಅಧ್ಯಕ್ಷರಾಗಿ ಕಾರ್ಯನಿರ್ವಹಿಸಿ ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆಯಾದರು. ರಾಜಕೀಯ ಕ್ಷೇತ್ರದಲ್ಲೂ ತಮ್ಮದೇಯಾದ ವಿಶೇಷಛಾಪನ್ನು ಮೂಡಿಸಿದ ಕೆಲವೇ ವ್ಯಕ್ತಿಗಳಲ್ಲಿ ದಿ. ಬಿ.ವಿ.ಸಿರಿಯಣ್ಣ ಪ್ರಮುಖರು ಎಂದರು. ಕಾಡುಗೊಲ್ಲಸಂಘದ ರಾಜ್ಯಾಧ್ಯಕ್ಷ ರಾಜಣ್ಣ ಮಾತನಾಡಿ, ಜನಾಂಗದ ಸಂಘಟನೆಯ ಬಗ್ಗೆ ಅಪಾರವಾದ ತುಡಿತ ಅವರಲ್ಲಿತ್ತು. ಯಾದವ ಸಮುದಾಯದ ವಿದ್ಯಾರ್ಥಿಗಳಿಗೆಪ್ರತಿಭಾಪುರಸ್ಕಾರನೀಡುವ ಕಾರ್ಯವನ್ನು ಜಾರಿಗೆ ತಂದಿದ್ದವರು. ಬಹುಮುಖಪ್ರತಿಭೆಬಿ.ವಿ.ಸಿರಿಯಣ್ಣಇಂದು ನಮ್ಮಲ್ಲಿಲ್ಲವಾದರೂ ಅವರು ಮಾಡಿದ ಕಾರ್ಯ ಸದಾನಮ್ಮನ್ನು ಕಾಡುತ್ತಿರುತ್ತದೆ. ಅವರ ಸೇವೆ ಸ್ಮರಣೀಯವೆಂದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ಟಿ.ರವಿಕುಮಾರ್, ನಿವೃತ್ತ ನೌಕರರ ತಾಲ್ಲೂಕು ಅಧ್ಯಕ್ಷ ಕರಿಯಪ್ಪ, ತಾಲ್ಲೂಕು ಗ್ಯಾರಂಟಿ ಸಮಿತಿ ಅಧ್ಯಕ್ಷ ಗದ್ದಿಗೆತಿಪ್ಪೇಸ್ವಾಮಿ, ವಿಧಾನಪರಿಷತ್ ಮಾಜಿಸದಸ್ಯೆಜಯಮ್ಮಬಾಲರಾಜು,ಬಿಜೆಪಿ ಯುವಮುಖಂಡ ಕೆ.ಟಿ.ಕುಮಾರಸ್ವಾಮಿ, ವೆಂಕಟೇಶ್‌ಯಾದವ್, ನಾಗಮ್ಮಸಿರಿಯಣ್ಣ, ಹಟ್ಟಿರುದ್ರಪ್ಪ, ಕೆ.ಎಸ್.ಶ್ರೀಕಾಂತ್, ಡಿವೈಎಸ್ಪಿ ರಾಜಣ್ಣ, ಪ್ರೊ.ದೇವೀರಪ್ಪ, ಶಿವಲಿಂಗಪ್ಪ, ಮೂಡಲಗಿರಿಯಪ್ಪ, ಜಿ.ಟಿ.ಶಶಿಧರ, ಎಲ್‌ಐಸಿದುಗ್ಗಾವರರಂಗಸ್ವಾಮಿ, ಮಂಜುನಾಥ ಉಪಸ್ಥಿತರಿದ್ದರು.



## ಫಾಸ್ಟ್ ನ್ಯೂಸ್

### ಉಗ್ರರನ್ನು ಸದೆಬಡಿದ ಭಾರತೀಯ ಸೇನೆಗೆ ಸಲಾಂ: ಸೈಯದ್



» **ಚಳ್ಳಕೆರೆ**

ಕಳೆದ ಏ.22ರಂದು ಕಾಶ್ಮೀರದ ಪಹಲ್ಗಾಮ್ ಪ್ರದೇಶದಲ್ಲಿ ಯಾತ್ರಾತ್ರಿಗಳಿಗೆ ಜಾತಿಕೇಳಿ ಗುಂಡಿಕ್ಕಿ ಕೊಂದ ಪಾಕಿಸ್ತಾನಬೆಂಬಲಿಗ ಉಗ್ರಗಾಮಿಗಳನ್ನು ಭಾರತ ಸರ್ಕಾರದ ರಕ್ಷಣಾ ಇಲಾಖೆ ಹಾಗೂ ಗೃಹ ಇಲಾಖೆ ಸಂಯುಕ್ತಕಾರ್ಯಚರಣೆ ನಡೆಸಿ ಆಪರೇಷನ್ ಸಿಂಧೂರ್ ಕಾರ್ಯಚರಣೆ ಮೂಲಕ ಉಗ್ರಗಾಮಿಗಳನ್ನು ಸದೆಬಡಿದಿದ್ದಲ್ಲದೆ, ಭಾರತದ ಮೇಲೆ ರಾಕೇಟ್ ದಾಳಿ ನಡೆಸಿದ ಪಾಕಿಸ್ತಾನಕ್ಕೂ ಸಹ ತಕ್ಕಪಾಠಕಲಿಸುವಲ್ಲಿ ಆಪರೇಷನ್ ಸಿಂಧೂರ್ ಕಾರ್ಯಕ್ರಮ ಯಶಸ್ವಿಯಾಗಿದೆ ಎಂದು ಚಳ್ಳಕೆರೆ ಭಾರತೀಯ ಮುಸ್ಲಿಂಬಾಂಧವರು ಭಾರತೀಯ ಸೇನೆಕಾರ್ಯವನ್ನು ಪ್ರಶಂಸಿಸಿದ್ದಾರೆ. ನಗರದ ಪ್ರವಾಸಿಮಂದಿರದಲ್ಲಿ ಹಮ್ಮಿಕೊಂಡಿದ್ದ ಪತ್ರಿಕಾಗೋಷ್ಠಿಯಲ್ಲಿ ಸಮುದಾಯದ ಮುಖಂಡ ಎಸ್.ಎಚ್.ಸೈಯದ್ಮಾತನಾಡಿ, ಕಳೆದ ಹಲವಾರು ವರ್ಷಗಳಿಂದ ಭಾರತೀಯರ ನೆಮ್ಮದಿಗೆ ಕಂಟಕಪ್ರಾಯವಾಗಿದ್ದ ಉಗ್ರಗಾಮಿಗಳನ್ನು ಸದೆಬಡಿಯುವಲ್ಲಿ ಭಾರತೀಯ ಸೇನೆ ಯಶಸ್ವಿಯಾಗಿದೆ. ಪಹಲ್ಗಾಮ್ ಘಟನೆಯ ನಂತರ ಉಗ್ರಗಾಮಿಗಳನ್ನು ಮಟ್ಟಹಾಕಲು ಪ್ರಧಾನಮಂತ್ರಿ ನರೇಂದ್ರಮೋದಿ, ಗೃಹ ಸಚಿವ ಅಮಿತ್‌ಶಾ, ರಕ್ಷಣಾ ಸಚಿವ ರಾಜನಾಥಸಿಂಗ್, ವಿದೇಶಾಂಗ ಸಚಿವ ಜೈಶಂಕರ್, ರಾಷ್ಟ್ರೀಯ ಭದ್ರತಾ ಸಲಹೆಗಾರ ಕೆ.ಸಿ.ಅಜಿತ್‌ದೋವಲ್‌ರವರ ಸಕಾಲಿನ ನಿರ್ಧಾರಗಳು ಆಪರೇಷನ್ ಸಿಂಧೂರ ಯಶಸ್ವಿಗೆ ಕಾರಣವಾಗಿದೆ. ವಿದೇಶಾಂಗ ಕಾರ್ಯದರ್ಶಿ ವಿಕ್ರಮ್‌ಮಿಸ್ತ್ರಿ, ಭಾರತೀಯ ಸೇನಾ ಮುಖ್ಯಸ್ಥೆ ಸೊಪಿಯಖುರೇಶಿ, ವ್ಯೂಮಿಕಾಸಿಂಗ್, ಗೋವಿಂದ್‌ಸಿಂಗ್, ಇಲಾಲ್‌ಆಹಮ್ಮದ್ ಹಾಗೂ ಯಾತ್ರಾತ್ರಿಗಳ ಜೊತೆಯಲ್ಲಿದ್ದ ಕುದುರೆ ಸವಾರ ಸೈಯದ್‌ಆದೀಲ್‌ಹುಸೇನ್‌ಶಾ ರವರ ಕಾರ್ಯವನ್ನು ಪ್ರಶಂಸಿಸಿದ್ದಾರೆ. ನಗರಸಭೆ ನಾಮಿನಿ ಸದಸ್ಯ ಡಿ.ಕೆ.ಅನ್ವರ್‌ಮಾಸ್ಟರ್, ಪುರಸಭೆ ಮಾಜಿ ಅಧ್ಯಕ್ಷ ಸಿ.ಆರ್.ಅಲ್ಲಾಬಕ್ಷ್, ಪುರಸಭೆ ಮಾಜಿಸದಸ್ಯ ಮಾರ್ಬಲ್‌ಸಲೀಂ, ಎಸ್.ಪಿ.ಜುಬೇರ, ಎಂ.ದಾದಾಪೀರ್, ಪಿ.ಬಷೀರ್‌ಹಯಾತ್, ಕಲೀಂವುಲ್ಲಾ, ಮುಜೀಬುಲ್ಲಾ, ನಯಾಜ್ ಮುಂತಾದವರು ಉಪಸ್ಥಿತರಿದ್ದರು.

### ಶಿವಮೊಗ್ಗ ಹಾಲುಒಕ್ಕೂಟ ವ್ಯಾಪ್ತಿಯ ಸಹಕಾರ ಸಂಘಗಳ ಸಭೆ



» **ಚಳ್ಳಕೆರೆ**

ನಗರದ ಶಿವಮೊಗ್ಗ ಹಾಲು ಒಕ್ಕೂಟದ ಉಪಕಚೇರಿಯ ಕುರಿಯನ್ ಸಭಾಂಗಣದಲ್ಲಿ ಚಳ್ಳಕೆರೆ, ಹಿರಿಯೂರು ಮತ್ತು ಮೊಳಕಾಲ್ಮೂರು ತಾಲ್ಲೂಕುಗಳ ಹಾಲುಉತ್ಪಾದಕ ಸಹಕಾರ ಸಂಘದ ಅಧ್ಯಕ್ಷರು, ಕಾರ್ಯದರ್ಶಿಗಳ ಸಭೆಯನ್ನು ಆಯೋಜಿಸಿದ್ದು, ಕೆಎಂಎಫ್ ಜಿಲ್ಲಾ ನಿರ್ದೇಶಕ ಬಿ.ಸಿ.ಸಂಜೀವಮೂರ್ತಿ ಸಭೆಗೆ ಚಾಲನೆ ನೀಡಿ ಮಾತನಾಡಿದರು. ಶಿವಮೊಗ್ಗ ಹಾಲುಒಕ್ಕೂಟ ವ್ಯಪ್ತಿಯಲ್ಲಿ ಈಗಾಗಲೇ ಹಾಲುಒಕ್ಕೂಟದಿಂದ ಸಹಕಾರ ಸಂಘಗಳಿಂದ ಹಾಲು ಪಡೆಯಲಾಗುತ್ತದೆ. ಪ್ರತಿನಿತ್ಯವೂ ಹಾಲು ಖರೀದಿಸುವ ಸಂದರ್ಭದಲ್ಲಿ ಒಕ್ಕೂಟದ ನಿಯಮಗಳನ್ನು ಅಧ್ಯಕ್ಷರು ಮತ್ತು ಕಾರ್ಯದರ್ಶಿಗಳು ತಪ್ಪದೆ ಪಾಲಿಸಬೇಕಿದೆ. ವಿಶೇಷವಾಗಿ ಬಿಎಂಸಿ ಕೇಂದ್ರಗಳ ನಿರ್ವಹಣೆ, ಹಾಲಿನ ಗುಣಮಟ್ಟ, ಜಿಡ್ಡು ಮತ್ತು ಎಸ್‌ಎನ್‌ಎಫ್ ವ್ಯತ್ಯಾಸ, ಸ್ವಚ್ಚತೆ, ತೂಕ ಮತ್ತು ದಾಖಲಾತಿಗಳನ್ನು ಸಂಗ್ರಹಿಸಿ ಕಚೇರಿಗೆ ಕಳಿಸುವ ಬಗ್ಗೆ ನಿರ್ದೇಶನ ನೀಡಲಾಯಿತು. ಶಿವಮೊಗ್ಗ ವಿಭಾಗದ ಬಿ.ಆರ್. ರವಿಕುಮಾರ್, ಚಿತ್ರದುರ್ಗ ವಿಭಾಗದ ಆರ್. ರಾಜೇಶ್ವರಿ, ಚಳ್ಳಕೆರೆ ವಿಭಾಗದ ಡಿ.ಎಂ.ನಟರಾಜು, ವಿಸ್ತಾರಣಾಧಿಕಾರಿ ನಯಾಜ್‌ಬೇಗ್, ಕೃಷ್ಣಕುಮಾರ್, ಸುರೇಂದ್ರ, ಡಾ.ಶರತ್, ಸುರೇಶ್‌ಬಾಬು ಮುಂತಾದವರು ಪಾಲ್ಗೊಂಡಿದ್ದರು.

### ಮಾಂಸ ಮಾರಾಟ ನಿಷೇದ

» **ಹೊಸದುರ್ಗ**

ಮೇ 12 ರಂದು ಸೋಮವಾರ ಬೌದ್ಧಪೌರ್ಣಿಮೆ ಇರುವ ಪ್ರಯುಕ್ತ ಪಟ್ಟಣದ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಅಂಗಡಿಗಳಲ್ಲಿ ಮಾಂಸ ಮಾರಾಟ, ಕುರಿ ಮತ್ತು ಕೋಳಿ ಬಲಿ ಕೊಡುವುದನ್ನ ಸಂಪೂರ್ಣವಾಗಿ ನಿಷೇಧ ಮಾಡಲಾಗಿದೆ ಎಂದು ಪುರಸಭಾ ಮುಖ್ಯಾಧಿಕಾರಿ ಯೋಗೀಶ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಒಂದು ವೇಳೆ ಕಾನೂನು ಉಲ್ಲಂಘಿಸಿ ಮಾಂಸ ಮಾರಾಟ ಮಾಡುವುದು ಕಂಡು ಬಂದಲ್ಲಿ ಅಂತವರ ಮತ್ತು ಮಾಂಸ ಮಾರಾಟ ಮಾಡುವ ಅಂಗಡಿಗಳ ವಿರುದ್ಧ ಸೂಕ್ತ ಕ್ರಮ ಜರುಗಿಸಿ ಅಂಗಡಿ ಪರವಾನಿಗೆ ರದ್ದುಗೋಳಿಸಲಾಗುವುದು.




ಈ ವರ್ಷದಬೇಸಿಗೆಯತಾಪಮಾನ ಬಹುತೇಕ ಇಡೀ ಕರ್ನಾಟಕದ ಜನರನ್ನು ಅಲುಗಾಡಿಸಿ ಬಿಟ್ಟಿತು. ಅದರಲ್ಲೂ ಮಧ್ಯಮ, ಕೆಳಮಧ್ಯಮ ಮತ್ತು ಬಡವರ್ಗದ ಜನರು ತಾಪಮಾನದ ಏರಿಕೆಯಿಂದ ತತ್ತರಿಸಿ ಹೋದರು. ಕೆಲವು ಜೀವಗಳು ಹೊರಟೇ ಹೋದವು. ಇನ್ನೊಂದಷ್ಟು ಜನ ಅನಾರೋಗ್ಯಗಳಿಗೆ ತುತ್ತಾದರು. ಪ್ರಾಣಿಪಕ್ಷಿಗಳು ಕಣ್ಣ ಮುಂದೆಯೇ ತುಂಬಾ ಒದ್ದಾಡಿದವು......

ಈಗ ಎರಡು ಮೂರು ದಿನದಿಂದ ಸ್ವಲ್ಪಮಟ್ಟಿಗೆ ಉಷ್ಣಾಂಶ ಕಡಿಮೆಯಾಗಿದೆ. ಆದರೆ ಆ ತಾಪಮಾನದ ಹೊಡೆತನಮಗೆಒಂದುಬಹುದೊಡ್ಡಪಾಠವಾಗಬೇಕು ಇತ್ತೀಚೆಗೆ ಸಾಮಾಜಿಕ ಜಾಲತಾಣಗಳಲ್ಲಿ ಪ್ರತಿ ವರ್ಷ ಹೀಗೆ ಒಂದೊಂದು ಡಿಗ್ರಿ ಸೆಲ್ಸಿಯಸ್ ಉಷ್ಣಾಂಶ ಜಾಸ್ತಿಯಾಗುತ್ತಾ ಹೋಗುತ್ತದೆ ಎಂದು ಯಾರೋ ಬರೆದ ಒಂದು ಲೇಖನ ಪ್ರಸಾರವಾಗುತ್ತಿದೆ. ಅದು ಎಷ್ಟರಮಟ್ಟಿಗೆ ನಿಜವೋ ಗೊತ್ತಿಲ್ಲ. ಆದರೆ ಮುಂದೆಯೂ ಪರಿಸರವನ್ನು ಹೀಗೇ ನಿರ್ಲಕ್ಷಿಸಿದರೆ ಖಂಡಿತವಾಗಿಯೂ ತಾಪಮಾನದ ಹೊಡೆತಕ್ಕೆ ನಾವೆಲ್ಲರೂ ನಾಶವಾಗುವುದು ನಿಶ್ಚಿತ. ಅದಕ್ಕಾಗಿ ಆ ಹಂತ ತಲುಪುವ ಮುನ್ನವೇ ನಾವೆಲ್ಲ ಎಚ್ಚೆತ್ತುಕೊಳ್ಳಬೇಕಾಗಿದೆ ಮತ್ತು ಆ ನಿಟ್ಟಿನಲ್ಲಿ ಒಂದಷ್ಟು ಕೆಲಸ ಮಾಡಬೇಕಾಗಿದೆ........

ಮುಖ್ಯವಾಗಿ ಪ್ರತಿ ಗ್ರಾಮ ಪಂಚಾಯಿತಿ ಮಟ್ಟದಲ್ಲಿ, ಈ ವರ್ಷದ ಈಗ ಪ್ರಾರಂಭವಾಗಿರುವ ಮಳೆಗಾಲದಲ್ಲಿ ಕನಿಷ್ಠ ಒಂದು ಲಕ್ಷ ಗಿಡಗಳನ್ನು ಬೆಳೆಸುವ ಪ್ರತಿಜ್ಞೆ ಮಾಡಬೇಕು. ಹಾಗೆಯೇ ಹೋಬಳಿ ಮಟ್ಟದಲ್ಲಿ 10 ಲಕ್ಷ ಗಿಡಗಳು, ತಾಲೂಕು ಮಟ್ಟದಲ್ಲಿ 50 ಲಕ್ಷದಷ್ಟು ಗಿಡಗಳು ಮತ್ತು ಗ್ರೇಡ್–ಒನ್ ನಗರಗಳಲ್ಲಿ ಅಂದರೆ ಜಿಲ್ಲಾಮಟ್ಟದಲ್ಲಿ ಒಂದು ಕೋಟಿ ಗಿಡಮರಗಳನ್ನು ನೆಡುವ ಕಾರ್ಯಕ್ರಮವನ್ನು ತತ್ಕ್ಷಣದಿಂದಲೇ ಹಮ್ಮಿಕೊಳ್ಳಬೇಕು. ಸರ್ಕಾರ ಮತ್ತು ಸ್ವಯಂಸೇವಾ ಸಂಸ್ಥೆಗಳ ಜಂಟಿ ನೇತೃತ್ವದಲ್ಲಿ ಇದನ್ನು ಆರಂಭಿಸಬೇಕು. ಅಂದರೆ ಇಡೀ ರಾಜ್ಯದಲ್ಲಿ



ನೂರಾರು ಕೋಟಿ ಗಿಡಗಳನ್ನು ಈ ಮಳೆಗಾಲದ ಸಮಯದಲ್ಲಿ ನೆಟ್ಟರೆ ಕನಿಷ್ಠ ಅದರಲ್ಲಿ ತೀರಾ ಕಡಿಮೆ ಎಂದರೂ 30 ರಿಂದ 40 ಶೇಕಡಾ ಗಿಡಗಳು ಉಳಿಸಿ ಬೆಳೆಸುವಲ್ಲಿ ಯಶಸ್ವಿಯಾದರೆ ಎಷ್ಟೋ ಕೋಟಿ ಮರಗಳು ಬೆಳೆಯುತ್ತವೆ. ಇಡೀ ರಾಜ್ಯದಲ್ಲಿ ಅರಣ್ಯ ಪ್ರದೇಶ ತುಂಬಾ ಹೆಚ್ಚಾಗುತ್ತದೆ.....

ಆಗ ಆಮ್ಲಜನಕ ಹೆಚ್ಚಾಗುತ್ತದೆ. ಮಳೆಯ ಕೊರತೆ ಕಡಿಮೆಯಾಗುತ್ತದೆ. ತಾಪಮಾನದ ಕುಸಿತ, ಮನಸ್ಸಿನ ಆಹ್ಲಾದ, ಆರೋಗ್ಯ ಎಲ್ಲವುಗಳಲ್ಲಿ ಕೆಲವೇ ವರ್ಷದಲ್ಲಿ ಕ್ರಾಂತಿಕಾರಕ ಬದಲಾವಣೆ ಉಂಟು ಮಾಡುತ್ತದೆ.....

ಇಷ್ಟನ್ನು ಸಹ ನಮ್ಮಿಂದ ಮಾಡಲು ಸಾಧ್ಯವಿಲ್ಲವೇ !

ಪ್ರಕೃತಿ ತನ್ನ ಕಷ್ಟ ಸಹಿಸಿ ನಮಗೆ ಸಹಾಯ ಮಾಡುತ್ತದೆ. ನಾವು ಆ ಪರಿಸರವನ್ನು ಉಳಿಸಲು ಇಷ್ಟೂ ಪ್ರಯತ್ನ ಪಡದಿದ್ದರೆ ನಮಗೆ ಕ್ಷಮೆಯೇ ಇಲ್ಲ.....

ಯಾರು ಏನು ಮಾಡುತ್ತಿರೋ ಗೊತ್ತಿಲ್ಲ. ಅವರವರ ಸಾಮರ್ಥ್ಯಕ್ಕೆ ತಕ್ಕಂತೆ ಸರ್ಕಾರ ಮತ್ತು ಸ್ವಯಂಸೇವಾ ಸಂಸ್ಥೆಗಳು ಹಾಗೂ ಸಾಮಾನ್ಯ ಜನರು ದಯವಿಟ್ಟು ಇದನ್ನು ಒಂದು ದೊಡ್ಡ ಅಭಿಯಾನವಾಗಿ ಪ್ರಾರಂಭಿಸಿ, ಮಳೆಗಾಲದಲ್ಲಿ ಗಿಡ ನೆಟ್ಟರೆ, ನೀರು ಉಣಿಸುವ ತೊಂದರೆಯೂ ಇರುವುದಿಲ್ಲ. ಸಹಜವಾಗಿಯೇ ಮಳೆ ನೀರಿನಲ್ಲಿ ಅವು ಬೆಳೆಯುತ್ತವೆ. ಸ್ವಲ್ಪ ಸಸಿ ದೊಡ್ಡದಾಗುವವರೆಗೂ ಒಂದಷ್ಟು ಜಾಗೃತಿ ವಹಿಸಿದರೆ ಸಾಕು....

ಯೋಚಿಸಿ, ಏನನ್ನಾದರೂ ಮಾಡಿ. ಮುಂದಿನ ವರ್ಷಕ್ಕೆ ಇಷ್ಟೊಂದು ತಾಪಮಾನ ಹೆಚ್ಚಾಗದೆ ನಿಯಂತ್ರಿಸಲು ನಮ್ಮ ನಮ್ಮ ಕರ್ತವ್ಯ ನಿರ್ವಹಿಸೋಣ. ಈ ವರ್ಷದ ಭೀಕರ ಬಿಸಿಲನ್ನು ಮರೆಯುವುದು ಬೇಡ. ಅದು ಸದಾ ನೆನಪಾಗಿ ಗಿಡ ಬೆಳೆಸುವ ಕೆಲಸ ವೇಗ ಪಡೆಯಲಿ......

ಹಾಗೆಯೇ, ಫ್ಲೈ ಓವರ್ ಗಳು,

ಅನಾವಶ್ಯಕವಾದ ಉದ್ದುದ್ದ, ಹೆಚ್ಚು ಅಗಲದ ರಸ್ತೆಗಳು ಮುಂತಾದವುಗಳನ್ನು ಕಡಿಮೆ ಮಾಡಿ, ಆ ಜಾಗದಲ್ಲಿ ಕೆರೆಕಟ್ಟೆಗಳು, ಇಂಗು ಗುಂಡಿಗಳು ಮುಂತಾದ ನೀರಾವರಿ ಯೋಜನೆಗಳು, ನೀರಿನ ಸಂಗ್ರಹ ಕಾಲುವೆಗಳ ಬಗ್ಗೆ ಹೆಚ್ಚು ಗಮನಹರಿಸುವಂತೆ ಸ್ಥಳೀಯ ಜನರು ಅಲ್ಲಿನ ಆಡಳಿತ ಮತ್ತು ರಾಜಕೀಯ ವ್ಯವಸ್ಥೆಯನ್ನು ಒತ್ತಾಯಿಸಬೇಕಾಗುತ್ತದೆ. ಅಭಿವೃದ್ಧಿಯ ಪರಿಕಲ್ಪನೆಯನ್ನು ನಾವು ಬದಲಾಯಿಸಿಕೊಳ್ಳದಿದ್ದರೆ ಇಡೀ ದೇಶ ಸಿಮೆಂಟ್ ಕಾಡಾಗಿ ತಾಪಮಾನ, ಬರಗಾಲ ನಮ್ಮನ್ನು ನಿರಂತರವಾಗಿ ಕಾಡುತ್ತದೆ. ನಮ್ಮ ಮುಂದಿನ ಪೀಳಿಗೆಗೆ ನಾವು ಅತ್ಯಂತ ಅಪಾಯಕಾರಿ ವಾತಾವರಣವನ್ನು ಕೊಡುಗೆಯಾಗಿ ನೀಡಿದಂತಾಗುತ್ತದೆ.ಅವರು ನಮ್ಮನ್ನು ಕ್ಷಮಿಸುವುದಿಲ್ಲ......

ಪ್ರಬುದ್ಧ ಮನಸ್ಸು ಪ್ರಬುದ್ಧ ಸಮಾಜ, ಜನರ ಜೀವನಮಟ್ಟ ಸುಧಾರಣೆಯ ಗುರಿಯೊಂದಿಗೆ, ಮನಗಳಲ್ಲಿ, ಮನೆಗಳಲ್ಲಿ, ಮತಗಳಲ್ಲಿ, ಪರಿವರ್ತನೆಗಾಗಿ, ಮನಸ್ಸುಗಳ ಅಂತರಂಗದ ಚಳವಳಿ,




» **ಲೇಖನ**
**ವಿವೇಕಾನಂದ. ಹೆಚ್.ಕೆ.**
**9844013068**

## ದೇವರಲ್ಲಿ ನಂಬಿಕೆ ಇಟ್ಟುಕೊಂಡು ಧರ್ಮದಲ್ಲಿ ನಡೆಯಬೇಕು

» **ಹೊಸದುರ್ಗ**

ಪ್ರತಿಯೊಬ್ಬ ಮನುಷ್ಯನೂ ಸಹಾ ದೇವರು ಮತ್ತು ಧರ್ಮದಲ್ಲಿ ನಂಬಿಕೆ ಇಡಬೇಕು,ಹಾಗೆಯೇ ಅಧರ್ಮವನ್ನು ಬಿಟ್ಟು ಧರ್ಮದ ಹಾದಿಯಲ್ಲಿ ನಡೆಯಬೇಕು ಎಂದು ಭಗೀರಥ ಪೀಠ ಬ್ರಹ್ಮವಿದ್ಯಾನಗರದ ಶ್ರೀ ಪುರುಷೋತ್ತಮಾನಮದಪುರಿ ಸ್ವಾಮೀಜಿ ಕರೆ ನೀಡಿದರು.

ತಾಲೂಕಿನ ಕಸಬಾ ಹೋಬಳಿಯ 1 ನೇ ಯಾಲಕ್ಕಪ್ಪನಹಟ್ಟಿ ಗ್ರಾಮದಲ್ಲಿ ಭಾನುವಾರ ಶ್ರೀ ಭೂತಪ್ಪಸ್ವಾಮಿಯವರ ನೂತನ ದೇವಾಲಯ ಲೋಕಾರ್ಪಣೆ ಮತ್ತು ವಿಗ್ರಹ ಪ್ರತಿಷ್ಠಾಪನೆ,ಹವನ–ಹೋಮದ ಪೂಜಾ ಕಾರ್ಯದಲ್ಲಿ ಭಗವಹಿಸಿ ನಂತರ ಆಶೀರ್ವಚನ ನೀಡಿದರು.ಯಾರು ಧರ್ಮದಿಂದ ನಡೆದುಕೊಳ್ಳುತ್ತಾರೆ ಅಂತವರು ಸನ್ಮಾರ್ಗದ ಹಾದಿಯಲ್ಲಿ ಸಾಗುತ್ತಾರೆ. ಕಷ್ಟ ಬಂದಾಗ ದೇವರನ್ನು ಸ್ಮರಿಸುವ ಬದಲು ನಿತ್ಯವೂ ಸಹ ಭಗವಂತನನ್ನ ಸ್ಮರಿಸಿ, ಜೀವನದಲ್ಲಿ ಅಮೂಲ್ಯವಾದದ್ದು ಧರ್ಮ, ಸಂಸ್ಕಾರ. ಸಂಸ್ಕೃತಿ, ಧರ್ಮ ಮತ್ತು ಸಂಸ್ಕಾರ ಇವುಗಳ ಕೇಂದ್ರ ಬಿಂದು ಹಾಗಬೇಕು, ನಮ್ಮ ಬದುಕು ಧಾರ್ಮಿಕ ವಿಧಿ ವಿಧಾನಗಳ ಜೊತೆ ಹೋಗಿದ್ದೆ ಆದರೆ ನಮ್ಮ ಬದುಕು ಸಾರ್ಥಕವಾಗುತ್ತದೆ ಎಂದರು.ಶ್ರೀಮದ್ ಆನೆಗೊಂದಿ



ರತ್ನಸಿಂಹಾಸನ ಸರಸ್ವತಿ ಪೀಠಾಧ್ಯಕ್ಷರದ ಶ್ರೀ ಪುಟ್ಟಸ್ವಾಮಿಗಳು,ವಿಶ್ವಬ್ರಾಹ್ಮಣ ಮಹಾಸಂಸ್ಥಾನ ಮಠ ಹೊಸದುರ್ಗ ಪ್ರದೀಪ್ ಶರ್ಮ ಇವರ ನೇತೃತ್ವದಲ್ಲಿ ಹೋಮ–ಹವನಾಧಿಗಳು ಪೂರ್ಣಾಹುತಿ ಕಾರ್ಯಕ್ರಮಗಳು ನಡೆದವು ಈ ಸಂಧರ್ಬದಲ್ಲಿ ವೈ.ಡಿ.ತಿಮ್ಮಪ್ಪ, ಗುರುಮೂರ್ತಿ, ವೈ.ಎಸ್.ರಾಜೇಶ್, ವೈ.ಟಿ.ಶಾಂತಪ್ಪ, ವೆಂಕಟೇಶ್,ಗಂಗಾಧರ್ ಸೇರಿದಂತೆ ದೇವಸ್ಥಾನ ಸಮಿತಿಯವರು ಉಪಸ್ಥಿತರಿದ್ದರು.ಪಟ್ಟಣದ ಶ್ರೀ ದುರ್ಗಾಂಬಿಕಾ ಮತ್ತು ಕಾಳಮ್ಮ,ಅರಳಿಹಳ್ಳಿ ಮೈಲಾರಲಿಂಗಸ್ವಾಮಿ, ಸೋಮಸಂದ್ರ ಶ್ರೀ ಆಂಜನೇಯಸ್ವಾಮಿ,ಶೀವನೇಕಟ್ಟೆ ಕಾಳಮ್ಮ,ಸೋಮಸಂದ್ರದ ಸೋಮ ದೇವರು ಹಾಗೂ ಭೂತಪ್ಪ ದೇವರುಗಳು ಆಗಮಿಸಿದ್ದವು.ಬೆಳಗಿನ ಜಾವ ಭೂತಪ್ಪಸ್ವಾಮಿಯವರಿಗೆ ಅಷ್ಟಬಂಧನ ಸಹಿತ ಪೀಠಬಂಧನ, ನೇತ್ರೋನ್ಮಿಲನ, ಕದಳಿಭೇಧನ, ಪ್ರತಿಷ್ಠಾಪನಾ ಹೋಮಾಧಿಗಳು, ಪೂರ್ಣಾಹುತಿ, ಕುಂಭಾಭೀಷೇಕ, ಪಂಚಾಮೃತಾಭೀಷೇಕ, ಮಹಾಮಂಗಳಾರತಿ ಹಾಗೂ ತೀರ್ಥಪ್ರಸಾದ ವಿನಿಯೋಗ ನಿರಂತರ ಅನ್ನದಾಸೋಹ ನಡೆಯಿತು.ಬೆಳಿಗ್ಗೆ 10 ಗಂಟೆಗೆ ದೋಣಿಸೇವೆ ನೆರವೇರಿತು, ರಾತ್ರಿ 9 ಗಂಟಗೆ ಖನಿಜ ನಿಗಮ ಮಂಡಳಿಯ ಮಾಜಿ ಅಧ್ಯಕ್ಷ ಎಸ್.ಲಿಂಗಮೂರ್ತಿ ಪ್ರಾಯೋಜಕತ್ವದಲ್ಲಿ ತುಮಕೂರಿನ ಜ್ಯೋತಿ ಮೆಲೋಟಿಸ್ ಅರ್ಕೆಸ್ಟ್ರಾ ಇವರಿಂದ ಮನೋರಂಜನೆ ಕಾರ್ಯಕ್ರಮ ನಡೆಯಿತು. ಮೇ 12 ರಂದು ಸೋಮವಾರ ಸಂಜೆ 5 ಗಂಟೆಗೆ ವಿವಿಧ ಕಲಾ ತಂಡಗಳೊಂದಿಗೆ ದೇವರುಗಳ ಉತ್ಸವ ನಡೆಯಲಿದೆ.

### ಶ್ರೀಮಂತಿಕೆ ಎಂದರೆ ಅದು ಹೃದಯ ಶ್ರೀಮಂತಿಕೆ



**ಹೊಸದುರ್ಗ:** ಪ್ರತಿಯೊಬ್ಬರಲ್ಲೂ ಸಹಾ ಹೃದಯವಂತಿಕೆ ಇರಬೇಕು,ಧಾನ–ಧರ್ಮ ಮಾಡುವ ಹೃದಯ ವೈಶಾಲ್ಯತೆ ಇರಬೇಕು, ಹೃದಯ ಶ್ರೀಮಂತಿಕೆ ಇದ್ದವನು ನಿಜವಾದ ಶ್ರೀಮಂತ ಕೇವಲ ಹಣ ಇದ್ದರೆ ಸಾಲದು ಹಣಕ್ಕೆ ತಕ್ಕಂತೆ ಗುಣ ಏರಬೇಕು, ಹಣ ಇದ್ದು ಅದಕ್ಕೆ ತಕ್ಕಂತೆ ಒಳ್ಳೆಯ ಗುಣ ಹೊಂದಿದ್ದವರು ಓ.ನಾಗೇಂದ್ರಯ್ಯನವರು ಎಂದು ಭಗೀರಥ ಪೀಠ ಬ್ರಹ್ಮವಿದ್ಯಾನಗರದ ಶ್ರೀ ಪುರುಷೋತ್ತಮಾನಂದ ಪುರಿಸ್ವಾಮೀಜಿ ಹೇಳಿದರು. ಪಟ್ಟಣದ ಸಮಾಜ ಸೇವಕ ಎಸ್.ಎಲ್.ಎನ್.ಎಸ್ ಗ್ರೂಪ್ಸ್ ಮಾಲೀಕರಾದ ಓ.ನಾಗೇಂದ್ರಯ್ಯ ಅವರ ನುಡಿನಮನ ಕಾರ್ಯಕ್ರಮದ ಅಂಗವಾಗಿ ಆಯೋಜಿಸಲಾಗಿದ್ದ ಧಾರ್ಮಿಕ ಸಮಾರಂಭದ ದಿವ್ಯ ಸಾನಿದ್ಯ ವಹಿಸಿ ಆಶೀರ್ವಚನ ನೀಡಿದರು.ಮನುಷ್ಯ ಹುಟ್ಟುತ್ತಾನೆ ಕೋನೆಗೆ ಅವನ ಅವಧಿ ಮುಗಿದ ಮೇಲೆ ಶಾಶ್ವತವಾಗಿ ತನ್ನ ದೇಹವನ್ನ ತ್ಯಜಿಸುತ್ತಾನೆ.ಹುಟ್ಟು ಸಾವು ಎಂಬುದು ಖಚಿತ ಅದರೆ ಹುಟ್ಟಿದ ಮೇಲೆ ಸಮಾಜಕ್ಕೆ ಒಳಿತಾಗುವ ಸಮಾಜ ಮುಖಿಯಾದಂತಹ ಕೆಲಸ ಕಾರ್ಯಗಳನ್ನ ಮಾಡಬೇಕು ಈ ಹಿನ್ನೆಲೆಯಲ್ಲಿ ಓ.ನಾಗೇಂದ್ರಯ್ಯನವರು ಅವರ ಜೀವಿತವಧಿಯಲ್ಲಿ ಸಾಕಷ್ಟು ಸಮಾಜ ಮುಖಿಯದ ಕೆಲಸ ಕಾರ್ಯಗಳನ್ನ ಮಾಡಿದ್ದಾರೆ ನಿರ್ಗತಿಕರಿಗೆ, ದುರ್ಬಲರಿಗೆ, ಅಶಕ್ತರಿಗೆ ಸಹಾಯ ಹಸ್ತವನ್ನ ಚಾಚಿದ್ದಾರೆ ಇವರ ಎಲ್ಲಾ ಕೆಲಸ ಕಾರ್ಯಗಳ ಶ್ರಮಕ್ಕೆ ಇವರ ಶ್ರೀಮತಿಯವರಾದ ಸುಶೀಲಮ್ಮನವರು ಸಾಕಷ್ಟು ಬೆಂಬಲವಾಗಿ ನಿಂತಿದ್ದರು ಎಂದು ಸ್ಮರಿಸಿದ ಶ್ರೀಗಳು ಇವರ ಮಕ್ಕಳು ಕೂಡ ಸನ್ಮಾರ್ಗಿಗಳಾಗಿ ನಡೆಯುತ್ತಿದ್ದಾರೆ ಎಂದರು. ಉಚ್ಚ ನ್ಯಾಯಲಯದ ನಿವೃತ್ತ ನ್ಯಾಯಮೂರ್ತಿ ಹೆಚ್.ಬಿಲ್ಲಪ್ಪ ಕಾರ್ಯಕ್ರಮವನ್ನ ಜ್ಯೋತಿ ಬೆಳಗಿಸುವುದರ ಮೂಲಕ ಉದ್ಘಾಟಿಸಿದರು.ಕಾರ್ಯಕ್ರಮದಲ್ಲಿ ಕೆಪಿಸಿಸಿ ಸದಸ್ಯ ಎಂ.ಪಿ.ಶಂಕರ್,ನಿವೃತ್ತ ಅಧಿಕಾರಿ ಜಗನ್ನಾಥ್ ಸಾಗರ್, ಸುಶೀಲಮ್ಮ, ಜಿ.ಎನ್.ತಿಪ್ಪೇಸ್ವಾಮಿ, ಜಿ.ಎನ್. ನರಸಿಂಹಮೂರ್ತಿ, ಹೆಚ್.ರಂಗನಾಥ್ ಸೇರಿದಂತೆ ಮುಖಂಡರುಗಳು, ಜನಪ್ರತಿನಿಧಿಗಳು ಭಾಗವಹಿಸಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T